ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 05 RNI Number : KNKAN/25/A2770 05-01-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :05 ರಾಯಚೂರು 05-01-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಬಳ್ಳಾರಿ ಗುಂಪು ಘರ್ಷಣೆ: ನ್ಯಾಯಾಂಗ ತನಿಖೆಗೆ ಆರ್.ಅಶೋಕ್ ಒತ್ತಾಯ



ಬಳ್ಳಾರಿ,ಜ.04-

ಬಳ್ಳಾರಿಯಲ್ಲಿ ಗಲಾಟೆ ಮತ್ತು ಗುಂಡೇಟಿನಿಂದ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಒತ್ತಾಯಿಸಿದರು.

ಗುಂಪು ಘರ್ಷಣೆ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಬಳಿಕ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಆರ್.ಅಶೋಕ್, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ರಾಜ್ಯ ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬ್ಯಾನರ್ ಗಲಭೆ ಮತ್ತು ಗುಂಡಿನ ಚಕಮಕಿಯು ಮಾಜಿ ಸಚಿವ ಹಾಗೂ ಹಾಲಿ ಬಿಜೆಪಿ ಶಾಸಕ ಜನಾರ್ದನ ರೆಡ್ಡಿ ಅವರನ್ನು ಮುಗಿಸಲು ನಡೆಸಿದ ಪೂರ್ವಯೋಜಿತ ಸಂಚು. ಈ ಘಟನೆಯ ಬಗ್ಗೆ ಸಮಗ್ರವಾದ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಅವರು ಸರಕಾರವನ್ನು ಒತ್ತಾಯಿಸಿದರು. ಬಳ್ಳಾರಿ ಎಸ್‌ಪಿ ಅವರ ಅಮಾನತನ್ನು ಖಂಡಿಸಿರುವ ಆರ್.ಅಶೋಕ್, ಸರಕಾರ ಅಧಿಕಾರಿಗಳನ್ನು ಬಲಿಪಶು ಮಾಡುತ್ತಿದೆ ಮತ್ತು ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿಗಳಂತೆ ವರ್ತಿಸುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ವೇಳೆ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಹೊಸ ವರ್ಷ ರಕ್ತಸಿಕ್ತ ಅಧ್ಯಾಯದೊಂದಿಗೆ ಆರಂಭವಾಗಿದೆ. ಅದಕ್ಕೆ ಕಾರಣರಾದವರ ಪರವಾಗಿ ಸರಕಾರ ನಿಂತಿದೆ. ಶಾಸಕ ಭರತ್ ರೆಡ್ಡಿ ಮತ್ತು ಬೆಂಬಲಿಗರನ್ನು ಬಂಧಿಸುವ ಬದಲಿಗೆ, ಜನಾರ್ದನ ರೆಡ್ಡಿ ವಿರುದ್ಧ ಪ್ರಕರಣ ದಾಖಲಿಸಿದ್ದು ಏಕೆ? ಎಂದು ಪ್ರಶ್ನಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಬಳ್ಳಾರಿ ಗಲಭೆ ಪ್ರಕರಣ ಸಿಐಡಿ ತನಿಖೆಗೆ ಪರಿಶೀಲನೆ



ಬೆಂಗಳೂರು,ಜ.4-

ಬಳ್ಳಾರಿಯಲ್ಲಿ ನಡೆದ ಗುಂಪು ಗಲಭೆ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸುವ ಬಗ್ಗೆ ಪರಿಶೀಲಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿಯ ಗಲಭೆಗೆ ಸಂಬಂಧಪಟ್ಟಂತೆ ಖಾಸಗಿ ವ್ಯಕ್ತಿಗಳ ಬಂದೂಕು ಮತ್ತು ಗುಂಡುಗಳನ್ನು ಜಪ್ತಿ ಮಾಡಲಾಗಿದೆ. ಅವುಗಳ ಪರಿಶೀಲನೆಗೆ ಎಫ್ ಎಸ್ ಎಲ್ ಪ್ರಯೋಗಾಲಯಕ್ಕೆ ಕಳಿಸಲಾಗಿದೆ ಎಂದರು.

ಯಾರ ಬಂದೂಕಿನಿಂದ ಬುಲೆಟ್ ಹಾರಿದೆ ಎಂಬುದನ್ನು ಎಫ್ ಎಸ್ ಎಲ್ ವರದಿ ಬಳಿಕ ತಿಳಿಯಲಿದೆ. ಪೊಲೀಸ್ ಅಧಿಕಾರಿಗಳ ಬಂದೂಕಿನಿಂದ ಗುಂಡು ಹಾರಿಲ್ಲ ಎಂದು ಎಡಿಜಿಪಿಯವರು ತಿಳಿಸಿದ್ದಾರೆ. ಖಾಸಗಿ ವ್ಯಕ್ತಿಗಳ ಗನ್ ಮ್ಯಾನ್ ಬಂದೂಕಿನಿಂದಲೇ ಗುಂಡು ಹಾರಿರುವುದು ಖಚಿತವಾಗಿದೆ. ಆದರೂ ಪರಿಶೀಲನೆಯ ಬಳಿಕ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಘಟನೆಯನ್ನು ಸಿಐಡಿ ತನಿಖೆಗೆ ವಹಿಸುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಅವರ ಜೊತೆ ಚರ್ಚೆ ನಡೆಸಿದ ಬಳಿಕ, ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು.ಶಾಸಕ ಭರತ್ ರೆಡ್ಡಿಯನ್ನು ಬಂಧಿಸದಿದ್ದರೆ ಪಾದಯಾತ್ರೆ ಮಾಡುವುದಾಗಿ ಬಿಜೆಪಿ ನಾಯಕರು ಹೇಳುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಬಂಧಿಸುವುದು ದೊಡ್ಡ ವಿಚಾರ ಅಲ್ಲ. ಆದರೆ ಕಾನೂನಿನ ಅಂಶಗಳನ್ನು ಪರಿಶೀಲಿಸಿ ಮುಂದಿನ ಹೆಜ್ಜೆ ಇಡಬೇಕಿದೆ. ಗುಂಡು ಹಾರಿದ್ದರ ಬಗ್ಗೆ ಪತ್ತೆ ಹಚ್ಚಿ ನಿರ್ದಿಷ್ಟ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳುವುದು ಅನಿವಾರ್ಯ. ಆದರೆ ಈ ಸಂದರ್ಭದಲ್ಲಿ ಸೂಕ್ತ ಪುರಾವೆಗಳನ್ನು ಕಲೆ ಹಾಕಬೇಕಿದೆ ಎಂದರು.

ತಮಗೆ ಜೆಡ್ ಪ್ಲಸ್ ರಕ್ಷಣೆ ಒದಗಿಸಬೇಕೆಂದು ಶಾಸಕ ಜನಾರ್ದನ ರೆಡ್ಡಿ ಬರೆದಿರುವ ಪತ್ರ ನನಗೆ ತಲುಪಿಲ್ಲ. ಪತ್ರ ಬಂದರೆ ಸೂಕ್ತ ಕ್ರಮ ತೆಗದುಕೊಳ್ಳಲಾಗುವುದು. ಘಟನೆಗೆ ಸಂಬಂಧಪಟ್ಟಂತೆ ಶಾಸಕ ನ.ರಾ.ಭರತ್ ರೆಡ್ಡಿ ಮತ್ತು ಜನಾರ್ದನ ರೆಡ್ಡಿ ಇಬ್ಬರೂ ದೂರು

3ನೇ ಪುಟಕ್ಕೆ

ರಿಮ್ಸ್ ಬಿಎಸ್ಸಿ ನರ್ಸಿಂಗ್ ವಿದ್ಯಾರ್ಥಿನಿಯರ ವಸತಿ ನಿಲಯ ಕಟ್ಟಡದ ಲೋಕಾರ್ಪಣೆ

ಕಿದ್ವಾಯಿ ಫೆರಿಫೆರಲ್ ಕ್ಯಾನ್ಸರ್ ಚಿಕಿತ್ಸಾ ಘಟಕದ ಕಟ್ಟಡ ಕಾಮಗಾರಿಗೆ ಸಚಿವರಿಂದ ಶಂಕುಸ್ಥಾಪನೆ



ರಾಯಚೂರು,ಜ.04-

ರಾಯಚೂರಿನ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಕಿದ್ವಾಯಿ ಫೆರಿಫೆರಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ನಿರ್ಮಿಸುವ ಅಂದಾಜು ಮೊತ್ತ 2000 ಲಕ್ಷ ರೂ ಮೊತ್ತದ ಕಟ್ಟಡ ಕಾಮಗಾರಿಗೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಎನ್ ಎಸ್ ಬೋಸರಾಜು ಅವರು ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಶಂಕುಸ್ಥಾಪನೆ ನೆರವೇರಿಸಿದರು.

ಜಿಲ್ಲಾಡಳಿತ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ರಿಮ್ಸ್ ಇವರ ಸಹಯೋಗದಲ್ಲಿ ನಗರದ ರಾಜೀವ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಜನವರಿ 4ರಂದು ನಡೆದ ಕಾರ್ಯಕ್ರಮದಲ್ಲಿ, ಅಂದಾಜು ಮೊತ್ತ 450.00 ಲಕ್ಷ ರೂ.ಗಳ ವೆಚ್ಚದಲ್ಲಿ ರಾಯಚೂರು ನಗರದ ರಿಮ್ಸ್ ಸಂಸ್ಥೆಯ ಆವರಣದಲ್ಲಿ ನಿರ್ಮಾಣಗೊಂಡ ಬಿ.ಎಸ್ಸಿ . ನರ್ಸಿಂಗ್ ವಿದ್ಯಾರ್ಥಿನಿಯರ ವಸತಿ ನಿಲಯ ಕಟ್ಟಡವನ್ನು ಸಹ ಇದೆ ವೇಳೆ ಸಚಿವರು ಉದ್ಘಾಟಿಸಿದರು.

ಈ ವೇಳೆ ಸಚಿವರಾದ ಎನ್ ಎಸ್ ಬೋಸರಾಜು ಮಾತನಾಡಿ, ಈ ಕೇಂದ್ರವು ರಾಯಚೂರಲ್ಲಿ ಆಗಬೇಕು ಎಂಬುದು ನಮ್ಮ ಬಹು ದಿನಗಳ ಅಪೇಕ್ಷೆಯಾಗಿತ್ತು. ಆ ಕನಸು ಈಗ ಸಾಕಾರವಾಗಿದೆ. ಡಾ.ಶರಣಪ್ರಕಾಶ ಪಾಟೀಲ ಅವರು ವೈದ್ಯಕೀಯ ಇಲಾಖೆಯ ಸಚಿವರಾಗಿದ್ದರಿಂದಾಗಿ ನಮ್ಮಲ್ಲಿ ಈ ಹೊಸ ಕಟ್ಟಡ ನಿರ್ಮಾಣ ಕಾರ್ಯ ಆರಂಭವಾಗುತ್ತಿದೆ ಎಂದು ತಿಳಿಸಿದರು.

ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಮಾತನಾಡಿ, ರಾಯಚೂರಿನ ಒಪೆಕ್ ಆಸ್ಪತ್ರೆ ಎಲ್ಲ ವಿಭಾಗಗಳು ಉತ್ತಮವಾಗಿದೆ ಕಾರ್ಯನಿರ್ವಹಿಸುತ್ತಿವೆ. ಇದರಿಂದಾಗಿ ಜಿಲ್ಲೆಯ ಜನತೆಗೆ ಸಾಕಷ್ಟು ಅನುಕೂಲವಾಗಿದೆ ಎಂದರು.

ರಾಯಚೂರಿಗೆ ಟ್ರಾಮಾ ಕೇರ್ ಸೆಂಟರ್ ನಿರ್ಮಾಣ ಹಾಗೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣದ ಬಗ್ಗೆ ಬಜೆಟ್ ನಲ್ಲಿ ಘೋಷಣೆ ಮಾಡಲಾಗಿತ್ತು. ಈಗಾಗಲೇ ಟ್ರಾಮಾ ಸೆಂಟರ್ ನಿರ್ಮಾಣವಾಗಿದೆ. ಇದೀಗ ಮೊದಲನೇ ಹಂತದಲ್ಲಿ 20 ಕೋಟಿ ರೂ ವೆಚ್ಚದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ಈಗಾಗಲೇ ಒಪೆಕ್

3ನೇ ಪುಟಕ್ಕೆ

ರುದ್ರಭೂಮಿ ಮಂಜೂರಿಗೆ ಸಚಿವರಿಗೆ ಮನವಿ



ರಾಯಚೂರು,ಜ.4-

ಜಿಲ್ಲೆಮತ್ತು ತಾಲೂಕ ಹಾಗೂ ಹೋಬಳಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಗರ, ಪಟ್ಟಣ ಮತ್ತು ಗ್ರಾಮಗಳಲ್ಲಿ ದಲಿತರಿಗೆ ಸೇರಿದ ರುದ್ರಭೂಮಿ

ಪರಿಶೀಲಿಸಿ ಅಥವಾ ಇಲ್ಲವಾದಲ್ಲಿ ಹೊಸದಾಗಿ ರುದ್ರಭೂಮಿ ಮಂಜೂರು ಸೇರಿ ದಲಿತರಿಗೆ ಸೇರಿದ ರುದ್ರಭೂಮಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಮೂಲಕ ಅಭಿವೃದ್ಧಿಪಡಿಸಬೇಕು ಎಂದು ದಲಿತ ಮುಖಂಡರು ಜಿಲ್ಲಾ ಉಸ್ತುವಾರಿ ಸಚಿವರಾದ

ಶರಣ ಪ್ರಕಾಶ ಪಾಟೀಲ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ.

ರಾಜ್ಯದಲ್ಲಿ ಹಿಂದೂ ರುದ್ರಭೂಮಿ ಮಾದರಿ ರೀತಿಯಲ್ಲಿ ನವೀಕರಣ ಮಾಡಲು ಸರಕಾರವು ಯೋಜನೆ ರೂಪಿಸಿದೆ ಅದರಂತೆ ರುದ್ರಭೂಮಿಗಳಿಗೆ ಇರುವ ಜಾಗದಲ್ಲಿ ಅದನ್ನು ನವೀಕರಣ ಮಾಡಲು ಸರಕಾರ ಯೋಜನೆಯನ್ನು ರೂಪಿಸಿದೆ. ಎಲ್ಲಿ ರುದ್ರಭೂಮಿಗಳು ಇಲ್ಲವೋ ಅಂತ ಕಡೆ ರುದ್ರಭೂಮಿಗಾಗಿ ಸರಕಾರವು ಜಾಗವನ್ನು ಖರೀದಿಸಿ ನಿರ್ಮಿಸುವಂತೆ ಮತ್ತು ಅಭಿವೃದ್ಧಿ ಕೆಲಸಕ್ಕೆ ಸರಕಾರವು ಸೂಚಿಸಿದೆ. ಹಾಗೂ ರುದ್ರಭೂಮಿಯನ್ನು ಕಬಳಿಸಿದವರಿಗೆ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 297 (ಈಗ ಭಾರತೀಯ ನ್ಯಾಯ ಸಂಹಿತದ ಸೆಕ್ಷನ್ 301) ಈ ಕಾನೂನು ಸಮಾದಿ ಸ್ಥಳ ಅಥವಾ ಸ್ಮಶಾನದಲ್ಲಿ ಅತಿಕ್ರಮಣ ಮಾಡುವುದು, ಮಾನವ ಶವಕ್ಕೆ ಅವಮಾನ ಮಾಡುವುದು ಅಥವಾ ಅಂತ್ಯಕ್ರಿಯೆ ಸಮಾರಂಭಗಳಿಗಾಗಿ ನೆರೆದ ಜನರಿಗೆ ತೊಂದರೆ ಉಂಟುಮಡುವುದು ಶಿಕ್ಷಾರ್ಹ ಅಪರಾದವಾಗಿದೆ.ಭಾರತ ಸಂವಿಧಾನ ವಿಧಿ 21 (ಜೀವನದ ಹಕ್ಕು) ನ್ಯಾಯಾಂಗದ ವಿಧಿ 21 ಅನ್ನು ಗೌರವಯುತ ಜೀವನದ ಹಕ್ಕನ್ನು ಒಳಗೊಂಡಂತೆ

3ನೇ ಪುಟಕ್ಕೆ

ರಾಯಚೂರು ಮಹಾನಗರ ಪಾಲಿಕೆ ಖರೀದಿಸಿದ ಸ್ವಚ್ಛತಾ ವಾಹನಗಳಿಗೆ ಸಚಿವರಿಂದ ಚಾಲನೆ



ರಾಯಚೂರು ಜ.04

ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ನಗರ ಸ್ವಚ್ಛತೆಗೆ ಖರೀದಿಸಿದ ಸ್ವೀಪಿಂಗ್ ಯಂತ್ರ, ಒಳಚರಂಡಿ ನಿರ್ವಹಣೆಯ ರೆಹಿಕಲ್ ಮೌಂಟೆಡ್ ರೋಬೋಟ್ ಯಂತ್ರಕ್ಕೆ ಹಾಗೂ ಸ್ವಚ್ಛ ಭಾರತ ಮಿಷನ್ 2.0 ಅಡಿಯಲ್ಲಿ ವಿವಿಧ ಐಇಸಿ

ಚಟುವಟಿಕೆಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್‌ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ

3ನೇ ಪುಟಕ್ಕೆ

ಮಟಮಾರಿಯಲ್ಲಿ ವಿಜೃಂಭಣೆಯೊಂದಿಗೆ ನಡೆದ ಶ್ರೀ ವೀರಭದ್ರೇಶ್ವರ ರಥೋತ್ಸವ

ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಮಾಜಿ ಶಾಸಕರಾದ ತಿಪ್ಪರಾಜು ಹವಾಲ್ದಾರ ಭಾಗಿ

ರಾಯಚೂರು,ಜ.04-

ರಾಯಚೂರು ಮಟಮಾರಿ ಗ್ರಾಮದ ಆರಾಧ್ಯ ದೈವ ಶ್ರೀ ವೀರಭದ್ರೇಶ್ವರ ದೇವರ ವಾರ್ಷಿಕ ರಥೋತ್ಸವ ಶನಿವಾರ ಸಂಜೆ ವಿಜೃಂಭಣೆಯೊಂದಿಗೆ ನೆರವೇರಿತು. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಲಕ್ಷಾಂತರ ಭಕ್ತರು ಈ ಮಹೋತ್ಸವದಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು. ಬೆಳಗಿನ ಜಾವದಿಂದಲೇ ದೇವಾಲಯ ಆವರಣ ಭಕ್ತರ ಸಾಗರದಿಂದ ತುಂಬಿಕೊಂಡಿತ್ತು.



ದೇವರ ವಿಶೇಷ ಪೂಜೆ, ಅಭಿಷೇಕ ಮತ್ತು ಶ್ರೇಷ್ಠ ಅಲಂಕಾರಗಳೊಂದಿಗೆ ಶ್ರೀ ವೀರಭದ್ರೇಶ್ವರನು ಭವ್ಯವಾಗಿ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಹೂವಿನ ಹಾರಗಳು, ಬಾಳೆ ಎಲೆಗಳು, ಧ್ವಜಪತಾಕೆಗಳು ಮತ್ತು ಸಾಂಪ್ರದಾಯಿಕ ಅಲಂಕಾರಗಳಿಂದ ರಥವು ಕಣ್ಮನ ಸೆಳೆಯುವಂತೆ ಅಲಂಕೃತವಾಗಿತ್ತು.

ರಥೋತ್ಸವದಲ್ಲಿ ಮಾಜಿ ಶಾಸಕರಾದ ತಿಪ್ಪರಾಜು ಹವಾಲ್ದಾರ ಭಾಗವಹಿಸಿ ದೇವರ ದರ್ಶನ ಪಡೆದ ನಂತರ ಪೂಜೆ ಸಲ್ಲಿಸಿದರು. ಅವರು, ಶ್ರೀ ವೀರಭದ್ರೇಶ್ವರ ದೇವರ ಆಶೀರ್ವಾದದಿಂದ ನಾಡಿನ ಜನರಿಗೆ ಸುಖ, ಶಾಂತಿ ಮತ್ತು ಸಮೃದ್ಧಿ ದೊರಕಲಿ ಎಂದು ಪ್ರಾರ್ಥಿಸಿದರು ಮತ್ತು ಗ್ರಾಮದಲ್ಲಿ ಸದಾ ಸೌಹಾರ್ದತೆ ಮತ್ತು ಶಾಂತಿ ನೆಲೆಸಲಿ ಎಂಬ ಹಾರೈಕೆ ವ್ಯಕ್ತಪಡಿಸಿದರು.

ಮಹೋತ್ಸವದಲ್ಲಿ ವಿವಿಧ ಮಠಾಧೀಶರು, ಧಾರ್ಮಿಕ ಮುಖಂಡರು ಪಾಲ್ಗೊಂಡು ಶಾಸ್ತ್ರೋಕ್ತ ವಿಧಿವಿಧಾನಗಳನ್ನು ನೆರವೇರಿಸಿದರು. ವೇದಮಂತ್ರೋಚ್ಚಾರಣೆ, ಮಂಗಳವಾದ್ಯಗಳು ಮತ್ತು ಭಕ್ತಿಗೀತೆಗಳು ವಾತಾವರಣವನ್ನು ಸಂಪೂರ್ಣ ಧಾರ್ಮಿಕಮಯಗೊಳಿಸಿತು. ಭಕ್ತರು ಸಾವಿರಾರು ಸಂಖ್ಯೆಯಲ್ಲಿ ಸೇರಿ ರಥವನ್ನು ಎಳೆಯುವ ಮೂಲಕ ತಮ್ಮ ಭಕ್ತಿಯನ್ನು ತೋರ್ಪಡಿಸಿದರು. ವೀರಭದ್ರೇಶ್ವರ ಮಹಾರಾಜ ಕೀ ಜೈ ಎಂಬ ಜಯಘೋಷಗಳು ಊರಿನ ಪ್ರಮುಖ ಬೀದಿಗಳಲ್ಲಿ ಪ್ರತಿಧ್ವನಿಸಿತು. ಮಹಿಳೆಯರು, ಮಕ್ಕಳು ಮತ್ತು ವೃದ್ಧರು ಸಹ ಉತ್ಸಾಹದಿಂದ ಪಾಲ್ಗೊಂಡಿರುವುದು ವಿಶೇಷವಾಗಿತ್ತು.

ಈ ಮಹೋತ್ಸವವು ಧರ್ಮ, ಸಂಸ್ಕೃತಿ ಮತ್ತು ಗ್ರಾಮೀಣ

3ನೇ ಪುಟಕ್ಕೆ

ರಾಯಚೂರು ಜಿಲ್ಲಾ ಉತ್ಸವದ ಪ್ರಯುಕ್ತ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ



ರಾಯಚೂರು,ಜ.04-

ಜನವರಿ 29ರಿಂದ ಮೂರು ದಿನಗಳು ನಡೆಯಲಿರುವ ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ರವಿವಾರ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿತ್ತು.

ಪಂದ್ಯಾವಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ, ಸಣ್ಣ ನೀರಾವರಿ ಸಚಿವ ಎನ್ ಎಸ್ ಬೋಸರಾಜು ಚಾಲನೆ ನೀಡಿದರು.

ಬಳಿಕ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣ ಪ್ರಕಾಶ ಪಾಟೀಲ, ರಾಯಚೂರಿನಲ್ಲಿ ಜಿಲ್ಲಾ ಉತ್ಸವ ಅನೇಕ ವರ್ಷಗಳ ಬೇಡಿಕೆ ಆಗಿತ್ತು, ಅನೇಕ ಸಂಘ ಸಂಸ್ಥೆಗಳು ಪಾಲ್ಗೊಳ್ಳಲಿದೆ. ಎಲ್ಲರ ಸಹಕಾರದಿಂದ ಯಶಸ್ವಿಯಾಗುತ್ತದೆ ಎಂದರು.

ಸಚಿವ ಎನ್ ಎಸ್ ಬೋಸರಾಜು ಮಾತನಾಡಿ, ಜಿಲ್ಲಾ ಉತ್ಸವ ನಮ್ಮ ಹೆಮ್ಮೆ, ಸರ್ಕಾರದ ವತಿಯಿಂದ ಎಲ್ಲಾ ಸಹಕಾರ ಸಿಗಲಿದೆ, ಎಲ್ಲಾ ಅಧಿಕಾರಿಗಳು ಸಂಘ ಸಂಸ್ಥೆಗಳ ಸಹಭಾಗಿತ್ವ ಅಗತ್ಯವಾಗಿದೆ ಎಂದು ಹೇಳಿದರು.


ರಾಜಕೀಯ ಹಿಂಬಾಲಕರಿಗೆ ಕಾರ್ಯಕ್ರಮ ಸೀಮಿತ: ಶಾಸಕ ಡಾ.ಶಿವರಾಜ ಪಾಟೀಲ್ ಅಸಮಾಧಾನ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ನಗರ ಶಾಸಕ ಡಾ.ಶಿವರಾಜ ಪಾಟೀಲ ಮಾತನಾಡಿ, ರಾಯಚೂರು ಜಿಲ್ಲಾ ಉತ್ಸವದ ಆರಂಭದ ಕಾರ್ಯಕ್ರಮಕ್ಕೇ ಸಾರ್ವಜನಿಕರನ್ನು ಕಲಾವಿದರನ್ನು ದೂರ ಇಟ್ಟು ಕೇವಲ ರಾಜಕೀಯ ನಾಯಕರ ಹಿಂಬಾಲಕರಿಗೆ ಕರೆತರಲಾಗಿದ್ದು ಏತಕ್ಕಾಗಿ ಎಂದು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳ ಕೆಲಸದಲ್ಲಿ ಅನೇಕ ಲೋಪದೋಷಗಳು ಕಂಡುಬರುತ್ತಿವೆ. ವೇದಿಕೆಯಲ್ಲಿ ರಾಜಕೀಯ ಮುಖಂಡರ ಹಿಂಬಾಲಕರು ಇದ್ದಾರೆ. ಇದು ಸಾರ್ವಜನಿಕರಿಲ್ಲ, ಅವರಿಗೆ ಮಾಹಿತಿಯೇ ಗೊತ್ತಿಲ್ಲ, ಇದು ದುಃಖದ ವಿಚಾರ, ಜಿಲ್ಲಾ ಉತ್ಸವದ ಕುರಿತು ಪ್ರತಿದಿನದ ಪ್ರಕಟನೆ ನೀಡಬೇಕು. ಜನರಿಗೆ ಗಮನಸೆಳೆಯಲು, ಕಬಡ್ಡಿ ಸೇರಿ ಸ್ಥಳೀಯ ಕ್ರೀಡೆಗಳು ಇರಬೇಕು. ಕೇವಲ ಕ್ರೀಡಾಂಗಣಕ್ಕೆ ಸೀಮಿತ ಆಗಬಾರದು, ನಾಲ್ಕು ಝೋನ್ ಗಳಲ್ಲಿ ಮಾಡಬೇಕು. ಎಲ್ಲಾ ಸ್ಥಳೀಯ ಕಲಾವಿದರಿಗೆ ಸೇರಿಸಿಕೊಂಡು ಎಲ್ಲರನ್ನೂ ಒಗ್ಗೂಡಿ ಮಾಡಬೇಕು. ಇನ್ನೂ ಸಮಯವಿದೆ ಅಧಿಕಾರಿಗಳು ಯಾರು ಪ್ರಶ್ನೆ ಮಾಡುವುದಿಲ್ಲ ಎಂದು ಭಾವಿಸಬಾರದು ಎಂದರು.

ಕಾರ್ಯಕ್ರಮದಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕ ಬಸನಗೌಡ ದದ್ದಲ್, ವಿಧಾನ ಪರಿಷತ್ ಸದಸ್ಯ ಎ.ವಸಂತ ಕುಮಾರ, ಹಂಪನಗೌಡ

3ನೇ ಪುಟಕ್ಕೆ

ಬಳ್ಳಾರಿ ಗಲಭೆ ತನಿಖೆಯನ್ನು ಸಿಐಡಿಗೆ ವಹಿಸಲು ಚರ್ಚೆ: ಸತೀಶ ಜಾರಕಿಹೊಳಿ



ಶಿವಮೊಗ್ಗ,ಜ.04-

ಬಳ್ಳಾರಿಯಲ್ಲಿನ ಗಲಭೆ ಘಟನೆಯನ್ನು ಸಿಐಡಿ ತನಿಖೆಗೆ ವಹಿಸುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆದಿದೆ. ತನಿಖಾ ಸಂಸ್ಥೆಯ ವರದಿ ಬಂದ ಬಳಿಕ ಆ ಬಗ್ಗೆ ಚರ್ಚೆ ಮಾಡಬಹುದು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ರಾಜ್ಯಮಟ್ಟದ ವಾಲ್ಮೀಕಿ ಕಪ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆಗೆ ಭಾನುವಾರ ಶಿವಮೊಗ್ಗಕ್ಕೆ ಬಂದಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಬಳ್ಳಾರಿ ಘಟನೆ ರಾಜ್ಯ ಸರ್ಕಾರಕ್ಕೆ ಮುಜುಗರ ತರುವ ವಿಚಾರ. ಅದು ಬಹಳ ಸಣ್ಣ ಘಟನೆ. ಆದರೆ ಅಷ್ಟು ದೊಡ್ಡದು ಆಗಬಾರದಿತ್ತು. ಪೊಲೀಸರ ತನಿಖೆ ಬಳಿಕ ತಪ್ಪಿತಸ್ಥರು ಯಾರೆಂದು ತಿಳಿಯಲಿದೆ ಎಂದು ಹೇಳಿದ ಜಾರಕಿಹೊಳಿ, ಅಲ್ಲಿನ ಪರಿಸ್ಥಿತಿಯನ್ನು ಸರಿಯಾಗಿ ನಿರ್ವಹಣೆ ಮಾಡಲು ಆಗದೇ ಇರುವುದೇ ಎಸ್ಪಿ ಅವರನ್ನು ಸಸ್ಪೆಂಡ್ ಮಾಡಲು ಕಾರಣ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ರಾಜ್ಯದಲ್ಲಿ ಬಜೆಟ್ ನಂತರ ಅಧಿಕಾರದ ಹಸ್ತಾಂತರದ ಬಗ್ಗೆ ದೆಹಲಿಮಟ್ಟದಲ್ಲಿ ನಿರ್ಧಾರ ಕೈಗೊಳ್ಳಲಾಗುತ್ತದೆ. ನೀವು (ಮಾಧ್ಯಮದವರು) ಯಾರನ್ನ ತೆಗಿಬೇಕು ಅಂತಿರಾ, ಇಡಬೇಕು ಅಂತಿರಾ ಎಲ್ಲವೂ ನಿರ್ಧಾರ ಹೈಕಮಾಂಡ್ ಅವರದ್ದು. ಅಲ್ಲಿ ಕೇಳಿದರೆ ಸರಿಯಾದ ಉತ್ತರ ಸಿಗಲಿದೆ. ಹಾಗೆಂದು ಸದ್ಯ ಸಿಎಂ ಸ್ಥಾನದ ರೇಸ್‌ನಲ್ಲಿ ನಾನು ಇಲ್ಲ. ಅವಕಾಶ

3ನೇ ಪುಟಕ್ಕೆ

ಕ್ರೀಡೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಅಭಿನಂದನೆ



ಬಾಗಲಕೋಟೆ,ಜ.04-

ಬಾಗಲಕೋಟೆಯ ಬಸವೇಶ್ವರ ಸಂಯುಕ್ತ ಪದವಿ ಪೂರ್ವ ಕಾಲೇಜ್ ಪ್ರೌಢ ವಿಭಾಗದಲ್ಲಿ ಮೂರು ಜನ ವಿದ್ಯಾರ್ಥಿಗಳು ರಾಜ್ಯಮಟ್ಟದ ವಿವಿಧ ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ವನ್ನು ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಕುಮಾರ್ ಸಮೀರ್ ಬಾಡ ಗಂಡಿ ಈತನು 500 ಮೀಟರ್ ಟ್ರಾಕ್ ಸೈಕ್ಲಿಂಗ್ ನಲ್ಲಿ ರಾಜ್ಯಮಟ್ಟ ದಲ್ಲಿ ಪ್ರಥಮ ಸ್ಥಾನ ಪಡೆದು ರಾಂಚಿಯಲ್ಲಿ ನಡೆಯುವ ರಾಷ್ಟ್ರಮಟ್ಟದಲ್ಲಿ ಪಾಲ್ಗೊಳ್ಳಲಿದ್ದಾನೆ. ಅದೇ ರೀತಿಯಾಗಿ ಕುಮಾರ್ ಮಲ್ಲಿ ಕಾರ್ಜುನ್ ಚಿಂಚಲಿ ಈತನು 14 ವರ್ಯೋಮಾನ 38 ಕೆಜಿಯ ಕುಸ್ತಿ ಸ್ಪರ್ಧೆಯಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ

ಪಡೆದು ದೆಹಲಿಯಲ್ಲಿ ನಡೆಯುವ ರಾಷ್ಟ್ರ ಮಟ್ಟಕ್ಕೆ ಆಯ್ಕೆ ಯಾಗಿದ್ದಾನೆ. ಹಾಗೂ ಕುಮಾರಿ ಲಕ್ಷ್ಮಿ ಭಂಟನೂರ ಈತಳು ಸೈಕ್ಲಿಂಗ್ ಅಸೋಸಿಯೇಷನ್ ರೋಡ್ ಸೈಕ್ಲಿಂಗ್ ನಲ್ಲಿ ಭಾಗವಹಿಸಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಉತ್ತರಖಂಡದಲ್ಲಿ ನಡೆದ ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿದ್ದಾಳೆ.

ಈ ಮೂರು ವಿದ್ಯಾರ್ಥಿಗಳಿಗ್ಗೆ ಇಂದು ಬಿವಿವಿ ಸಂಘದ ಆಡಳಿತ ಕಛೇರಿಯ ಆವರಣದಲ್ಲಿ ಸಂಘದ ಕಾರ್ಯಾಧ್ಯಕ್ಷರು ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿ ಅಭಿನಂದಿಸಿದರು.

ಬಿವಿವಿ ಸಂಘದಗೌರವ ಕಾರ್ಯ ದರ್ಶಿಗಳಾದ ಮಹೇಶ ಅಥಣಿ, ಶಾಲಾ ಆಡಳಿತ ಮಂಡಳಿಯ ಕಾರ್ಯಧ್ಯಕ್ಷರಾದ ಮಹಾಂತೇಶ್ ಶೆಟ್ಟರ, ಶಾಲಾ ಆಡಳಿತ ಮಂಡಳಿಯ ಪದನಿಮಿತ್ತ ಕಾರ್ಯದರ್ಶಿಗಳಾದ ಕೆ.ಹೆಚ್ ಹೊಸೂರ, ಉಪ ಪ್ರಾಚಾರ್ಯರಾದ ಸಂಪತ ರಾಠೋಡ ಹಾಗೂ ಎಲ್ಲ ಸಿಬ್ಬಂದಿ ವರ್ಗದವರು ಅಭಿನಂದನೆಯನ್ನು ಸಲ್ಲಿಸಿದ್ದಾರೆ.

37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾಲ್ನಡಿಗೆ ಜಾಥಕ್ಕೆ ಚಾಲನೆ

ರಸ್ತೆ ಅಪಘಾತ ತಡೆಗಟ್ಟಲು ಪ್ರತಿಯೊಬ್ಬರು ಕೈ ಜೋಡಿಸಿ

ವಿಜಯನಗರ,ಜ.04-

ಸಂಚಾರಿ ನಿಯಮಗಳ ಪಾಲನೆ ಗಳನ್ನು ಉಲ್ಲಂಘನೆ ಮಾಡುವುದ ರಿಂದ ರಸ್ತೆಯಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿವೆ. ಆದ್ದರಿಂದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸೇರಿ ರಸ್ತೆ ಅಪಘಾತ ತಡೆಗಟ್ಟಲು ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಿ ಅಪಘಾತ ರಹಿತ ಜಿಲ್ಲೆಯನ್ನಾಗಿ ಮಾಡೋಣ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಎಂ.ರಾಜಶೇಖರ್ ಹೇಳಿದರು.

ನಗರದ ಮಹಾತ್ಮ ಗಾಂಧೀಜಿ ವೃತ್ತದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಇವರ ಜಂಟಿ ಸಹಯೋಗದಲ್ಲಿ 37ನೇ ರಾಷ್ಟೀಯ ರಸ್ತೆ ಸುರಕ್ಷತಾ ಮಾಸಾ ಚರಣೆ ಕಾಲ್ನಡಿಗೆ ಜಾಥಕ್ಕೆ ಚಾಲನೆ ನೀಡಿ ರಸ್ತೆ ನಿಯಮಗಳ ಪಾಲನೆಯ ಪೋಸ್ಟರ್ ಬಿಡುಗಡೆ ಮಾಡಿ ಅವರು ಶನಿವಾರ ಮಾತನಾಡಿದರು.

ಕಾನೂನು ನಿಯಮ ಪಾಲನೆ ಮಾಡಿ ಮತ್ತು ರಸ್ತೆ ಸುರಕ್ಷತಾ ಕ್ರಮಗಳ ಬಗ್ಗೆ ಹೆಚ್ಚಿನ ಜಾಗೃತಿ ವಹಿಸಬೇಕಿದೆ. ಈ ವರ್ಷವಾದರೂ



ಅಪಘಾತ ರಹಿತ ವರ್ಷವನ್ನಾಗಿ ಮಾಡುವ ಸಲುವಾಗಿ ರಸ್ತೆ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ. ವಾಹನ ಗಳ ಸಂಖ್ಯೆ ಮಿತಿ ಮೀರುತ್ತಿದ್ದು, ವಾಹನಗಳ ಸಂಖ್ಯೆ ಹೆಚ್ಚಾದಂತೆ ಅಪಘಾತಗಳ ಸಂಖ್ಯೆ ಸಹ ಹೆಚ್ಚಾಗುತ್ತಿವೆ ಎಂದು ಹೇಳಿದರು.

ಅಪಘಾತಕ್ಕೆ ಮುಖ್ಯ ಕಾರಣ ಗಳೆಂದರೆ ಸಂಚಾರಿ ನಿಯಮಗಳ ಉಲ್ಲಂಘನೆ ಮಾಡವುದು, ನಿರ್ಲಕ್ಷ್ಯ ತೆಯಿಂದ ವಾಹನ ಚಾಲನೆ ಮತ್ತು ಅತೀ ವೇಗವಾಗಿ ವಾಹನ ಚಲಿಸು ವುದು, ಹೆಲ್ಮೆಟ್ ಧರಿಸದೆ ಇರುವುದು. ಮದ್ಯಪಾನ ಸೇವನೆ ಮಾಡಿ ವಾಹನ ಚಲಾಯಿಸುವುದರಿಂದ ಅಪಘಾತ ಗಳು ಹೆಚ್ಚಾಗುತ್ತಿವೆ. 18 ವರ್ಷ ದೊಳಗಿನ ಮಕ್ಕಳು ವಾಹನ ಚಲಾಯಿ ಸಿದರೆ ಅವರ ಪೋಷಕರಿಗೆ 25 ಸಾವಿರ ರೂ. ದಂಡವನ್ನು ವಿಧಿಸಲಾಗುತ್ತದೆ. ಒಂದು ವೇಳೆ ಅಪಘಾತದಲ್ಲಿ ಕೂಲಿ ಕಾರ್ಮಿಕರು ಮೃತ ಪಟ್ಟರೆ ಮತ್ತು ಗಾಯಗೊಂಡರೆ ಕಾನೂನು ಬದ್ಧ ವಾಗಿ 10 ಲಕ್ಷಕ್ಕೂ ಹೆಚ್ಚು ಪರಿಹಾರ ಸಿಗುವ ಅವಕಾಶವಿದ್ದರೂ, ನಿಯಮ ಪಾಲನೆ ಮಾಡಿ ಜೀವ ಉಳಿಸಲು ಮೊದಲ ಆದ್ಯತೆ ನೀಡಿ ಎಂದು ಹೇಳಿ ದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಟಿ.ಮಂಜುನಾಥ ಮಾತನಾಡಿ, ಪೊಲೀಸ್ ಇಲಾಖೆಯಿಂದ ರಸ್ತೆ ಸುರಕ್ಷತಾ ಸಪ್ತಾಹವನ್ನು ಜ.1 ರಿಂದ ಜ.31 ರವರೆಗೆ ಎಲ್ಲಾ ಪ್ರೌಢ ಶಾಲೆಗಳಲ್ಲಿ ಮತ್ತು ಪ್ಯಾಕ್ಟರಿಗಳಲ್ಲಿ ಈ ಕಾರ್ಯಕ್ರವನ್ನು ಆಯೋಜಿಸಲಾಗಿದೆ. ರಸ್ತೆ ಸುರಕ್ಷತಾ ಕಾನೂನು ನಿಯಮಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ. ಪ್ರತಿ ವರ್ಷ 1.5 ಲಕ್ಷ ಕಿಂತ ಹೆಚ್ಚು ಅಪಘಾತದಿಂದ ಮೃತ ಪಟ್ಟರುತ್ತಾರೆ. ಎಲ್ಲರೂ ಕಡ್ಡಾಯವಾಗಿ ಕಾನೂನು ನಿಯಮಗಳನ್ನು ಪಾಲನೆ ಮಾಡಬೇಕು. ಫೆ.1 ರಿಂದ ಫೆ.31 ರವರೆಗೆ ನ್ಯಾಯಾಂಗ, ಪ್ರಾದೇಶಿಕ ಸಾರಿಗೆ ಇಲಾಖೆ ಮತ್ತು ಪೊಲೀಸ್ ಇಲಾಖೆಯಿಂದ ನಗರದ ಪ್ರಮುಖ ವೃತ್ತಗಳಲ್ಲಿ ನಿಯಮಗಳನ್ನು ಪಾಲನೆ ಮಾಡದವರ ವಾಹನಗಳ ಸವಾರರಿಗೆ ದಂಡವನ್ನು ವಿಧಿಸಲಾಗುತ್ತದೆ ಎಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ದಾಮೋದರ್ ಮಾತನಾಡಿ, ಮನುಷ್ಯನ ಜೀವ ಅತ್ಯಾಮೂಲ್ಯ ವಾದದ್ದು, ಅ ಜೀವವನ್ನು ಯಾವುದೇ ರೀತಿಯ ಅಪಘಾತಕ್ಕೆ ಒಳಗಾಗದೇ ನಿಮ್ಮ ಜೀವವನ್ನು ಕೊನೆವರೆಗೂ ನಿಮ್ಮ ಕುಟುಂಬದ ಜೊತೆಗೆ ನಡೆಸಲು ಕಾನೂನು ನಿಯಮಗಳ ಪಾಲನೆ ಮಾಡಬೇಕು. ಸವಾರರು ಚಾಲನೆ ಮಾಡುವಾಗ ಮೊಬೈಲ್ ಫೋನ್ ನಲ್ಲಿ ಮಾತನಾಡುವುದರಿಂದ ಭೀಕರ ಅಪಘಾತಗಳು ಸಂಭವಿಸುತ್ತದೆ. ಟ್ರಾಫಿಕ್ ಸಿಗ್ನಲ್‌ಗಳು, ರಸ್ತೆ ಬದಿಯ ಸೂಚನಾ ಫಲಕಗಳು ಮತ್ತು ಬೈಕ್‌ಗಳ ಸಿಗ್ನಲ್‌ಗಳನ್ನು ಸರಿಯಾಗಿ ಗಮನಿಸಿ ವಾಹನಗಳನ್ನು ಚಲಿಸಬೇಕು ಎಂದು ಮಾಹಿತಿ ನೀಡಿದರು.

ರಸ್ತೆ ಸುರಕ್ಷತಾ ಬಗ್ಗೆ ರಸ್ತೆ ನಿಯಮಗಳ ಪಾಲನೆಗಳ ಬ್ಯಾನರ್ ಹಾಗೂ ಬೋರ್ಡ್‌ಗಳನ್ನು ವಿದ್ಯಾರ್ಥಿಗಳು ಕೈಯಲ್ಲಿ ಹಿಡಿದುಕೊಂಡು ಘೋಷಣೆ ಕೂಗುತ್ತಾ ಮತ್ತು ಕರಪತ್ರಗಳನ್ನು ಸಾರ್ವಜನಿಕರಿಗೆ ವಿತರಣೆ ಮಾಡುತ್ತಾ ಹಾಗೂ ಆಟೋಗಳಲ್ಲಿ ಜಾಗೃತಿ ಬೋರ್ಡ್‌ಗಳ ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಲಾಯಿತು.

ನಗರದ ಮಹಾತ್ಮ ಗಾಂಧೀಜಿ ವೃತ್ತದಲ್ಲಿ ಮೆರೆವಣಿಗೆ ಆರಂಭಗೊಂಡು ಕೇಂದ್ರ ಬಸ್ ನಿಲ್ದಾಣ, ಡಾ.ಪುನೀತ್ ರಾಜಕುಮಾರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ವಿಜಯನಗರ ಕಾಲೇಜು ಮುಂಭಾಗದಿಂದ ಜಿಲ್ಲಾ ಒಳ ಕ್ರೀಡಾಂಗಣದವರೆಗೆ ಭವ್ಯ ಮೆರೆವಣಿಗೆ ನಡೆಸಲಾಯಿತ್ತು.

ಈ ವೇಳೆ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಪಿ. ಕುಮಾರ ಸ್ವಾಮಿ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ. ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ಸುಬ್ರಮಣ್ಯ ಎನ್., ಅಪರ ಹಿರಿಯ ಸಿವಿಲ್ ನ್ಯಾಯಾ ಧೀಶರಾದ ರೂಪ ಕೆ., ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯ ದರ್ಶಿಗಳಾದ ಪ್ರಶಾಂತ್ ನಾಗಲಾ ಪುರ್, 2ನೇ ಅಪರ ಸಿವಿಲ್ ನ್ಯಾಯ ಧೀಶರು ಶೃತಿ ತೇಲಿ, ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಸೂರಪ್ಪ ದೊಂಬರ್ ಮತ್ತೂರು, ನಗರಸಭೆಯ ಪೌರಾಯುಕ್ತರಾದ ಶಿವಕುಮಾರ್, ವಕೀಲರ ಸಂಘದ ಅಧ್ಯಕ್ಷರಾದ ಕೆ.ಪ್ರಹ್ಲಾದ್, ಡಿ.ಡಿ.ಪಿ.ಯು. ನಾಗರಾಜ್ ಹವಾಲ್ದಾರ್, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶೇಕ್ರಪ್ಪ ಹೊರಪೇಟೆ, ತಾಲ್ಲೂಕು ವೈದ್ಯಾಧಿಕಾರಿಗಳಾದ ಡಾ.ವಿನೋದ್ ಕುಮಾ ರ್ ಎಸ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಾದ ಸಿಂಧು ಅಂಗಡಿ, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಪಿ.ಶ್ರೀನಿ ವಾಸ್ ಮೂರ್ತಿ ಹಾಗೂ ಎನ್‌ಸಿಸಿ ಮತ್ತು ಸ್ಕೌಟ್ ಮತ್ತು ಗೈಡ್ಸ್ ವಿದ್ಯಾ ರ್ಥಿಗಳು ಮತ್ತು ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಭಾಗ ವಹಿಸಿದ್ದರು.

ಶಾಸಕ ಗಾವಲಿ ಜನಾರ್ದನ ರೆಡ್ಡಿ ಅವರ ಮೇಲೆ ಕಾಂಗ್ರೆಸ್ ದಬ್ಬಾಳಿಕೆ: ಮುನವಳ್ಳಿ, ಶಿವರಾಮಗೌಡ ನೈತಿಕ ಬೆಂಬಲ



ಗಂಗಾವತಿ,ಜ.04-

ಗಂಗಾವತಿ ಶಾಸಕರಾದ ಗಾಲಿ ಜನಾರ್ದನ್ ರೆಡ್ಡಿ ಅವರ ಬಳ್ಳಾರಿ ಮನೆ ಮುಂದೆ ಕಾಂಗ್ರೆಸ್ ನವರ ದಬ್ಬಾಳಿಕೆಯನ್ನು ಖಂಡಿಸಿ ಗಂಗಾವತಿಯ ನಿಕಟಪೂರ್ವ ಶಾಸಕರಾದ ಪರಣ್ಣ ಮನವಳ್ಳಿ,

ಮಾಜಿ ಸಂಸದ ಶಿವರಾಮಗೌಡ ಸೇರಿದಂತೆ ಪ್ರಮು ಖರು ಬಳ್ಳಾರಿಗೆ ತೆರಳಿ ನೈತಿಕ ಬೆಂಬಲ ವ್ಯಕ್ತ ಪಡಿಸಿದರು. ಗಂಗಾವತಿಯಿಂದ ಶಾಸಕರಾದ ಗಾಲಿ ಜನಾರ್ದನ್ ರೆಡ್ಡಿ ಅವರಿಗೆ ನೈತಿಕ ಬೆಂಬಲ ವ್ಯಕ್ತ ಪಡಿಸುವದಕ್ಕಾಗಿ ಮಾಜಿ ಸಂಸದರಾದ ಎಸ್. ಶಿವ ರಾಮು ಗೌಡ ಮಾಜಿ ಶಾಸಕ ಪರಣ್ಣ ಮುನವಳ್ಳಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷರಾದ ಸಿಂಗನಾಳ ವಿರೂಪಾಕ್ಷಪ್ಪ, ಮಾಜಿ ಕಾಡ ಅಧ್ಯಕ್ಷರಾದ ಹೆಚ್. ಗಿರೇಗೌಡ,

ನಗರಸಭಾ ಸದಸ್ಯರು, ಮುಖಂಡರುಗಳು, ಹಾಗೂ ನೂರಾರು ಕಾರ್ಯಕರ್ತರು ಭಾಗ ವಹಿಸಿ ಬೆಂಬಲ ವ್ಯಕ್ತ ಪಡಿಸಿದರು.

ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ: ಸಾಧನೆ ಯೋಜನೆಯಡಿ ಅರ್ಜಿ ಆಹ್ವಾನ

ಬಳ್ಳಾರಿ,ಜ.04-

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಯಿಂದ 2025-26ನೇ ಸಾಲಿಗೆ ಸಾಧನೆ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಹ ವಿಶೇಷ ಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿಶೇಷ ಚೇತನ ಫಲಾನುಭವಿಗಳು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಗ್ರಾಮ ಒನ್, ಕರ್ನಾಟಕ ಒನ್ ಮತ್ತು

ಬೆಂಗಳೂರು ಒನ್ ಅಥವಾ ನೇರವಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸಿದ ಜೆರಾಕ್ಸ್ ಪ್ರತಿಯ ಜೊತೆಗೆ ಅಗತ್ಯ ದಾಖಲಾತಿಗಳೊಂದಿಗೆ ನಗರದ ಕಂಟೋನ್

ಮೆಂಟ್ ಪ್ರದೇಶದ ಶಾಂತಿಧಾಮ ಆವರಣದ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು: ಬಳ್ಳಾರಿ, ಕಂಪ್ಲಿ-8880875620, ಸಿರುಗುಪ್ಪ-9743509698, ಸಂಡೂರು-

9632052270, ಕುರುಗೋಡು-9538000887 ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ ಹಾಗೂ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯು.ಆರ್.ಡಬ್ಲ್ಯೂಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಮಾಹಿತಿ ಹಕ್ಕು ಕಾಯ್ದೆ ಕಾರ್ಯಾಗಾರದಲ್ಲಿ ರಾಜ್ಯ ಮಾಹಿತಿ ಆಯೋಗದ ಆಯುಕ್ತರ ಸಲಹೆ

ಸಕಾಲದಲ್ಲಿ ಮಾಹಿತಿ ನೀಡಿ, ದಂಡದಿಂದ ಮುಕ್ತರಾಗಿ

ಬಳ್ಳಾರಿ,ಜ.04-

ವೈಯಕ್ತಿಕ ಮಾಹಿತಿ ಹೊರತುಪಡಿಸಿ, ಸರ್ಕಾರದ ಯೋಜನೆಗಳು, ಸೌಲಭ್ಯಗಳ ಹಿತಾಸಕ್ತಿಗೆ ಸಂಬಂಧಿಸಿದಂತೆ ಮಾಹಿತಿ ಪಡೆಯುವುದು ಸಾರ್ವಜನಿಕರ ಮೂಲಭೂತ ಹಕ್ಕಾಗಿದ್ದು, ಅರ್ಜಿ ಸಲ್ಲಿಸಿದ ಸಾವ ರ್ಜನಿಕರಿಗೆ ಅಧಿಕಾರಿಗಳು ಸಕಾಲ ದಲ್ಲಿ ಮಾಹಿತಿ ನೀಡುವ ಮೂಲಕ ದಂಡದಿಂದ ಮುಕ್ತರಾಗಬೇಕು ಎಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಕಲ ಬುರಗಿ ಪೀಠದ ಬಿ.ವೆಂಕಟ್ ಸಿಂಗ್, ಬೆಂಗಳೂರು ಪೀಠದ ರುದ್ರಣ್ಣ ಹರ್ತಿಕೋಟೆ, ರಾಜಶೇಖರ್.ಎಸ್ ಅವರು ಸಲಹೆ ನೀಡಿದರು.

ಕರ್ನಾಟಕ ಮಾಹಿತಿ ಆಯೋಗದ ನಿರ್ದೇಶನದಂತೆ ಜಿಲ್ಲಾಡಳಿತ ವತಿಯಿಂದ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ-ಸಿಬ್ಬಂದಿಗೆ ಶನಿವಾರ ಏರ್ಪಡಿಸಿದ್ದ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಜಿಲ್ಲಾ ಮಟ್ಟದ ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾಹಿತಿ ಅಧಿಕಾರಿಯು ಯಾವುದೇ ಸಮಂಜಸ ಕಾರಣವಿಲ್ಲದೇ ಮಾಹಿತಿಯನ್ನು ನೀಡದಿದ್ದಲ್ಲಿ ಅಥವಾ ದುರುದ್ದೇಶದಿಂದ ತಪ್ಪಾದ ಮಾಹಿತಿ ನೀಡಿದ್ದಲ್ಲಿ ದಂಡ ಪಾವತಿಸಬೇಕಾಗುತ್ತದೆ, ಜೊತೆಗೆ ಶಿಸ್ತುಕ್ರಮ ಜರುಗಿಸಬಹುದಾಗಿದೆ. ಹಾಗಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿಗಧಿತ ಕಾಲಾವಧಿಯೊಳಗೆ ಸಾರ್ವಜನಿಕರಿಗೆ ಮಾಹಿತಿ ನೀಡುವ ಮಾಹಿತಿ ಹೊಂದಬೇಕು ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತರು ಗಳು ಪ್ರತಿಪಾದಿಸಿದರು.

ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಕಲಬುರಗಿ ಪೀಠದ



ಬಿ.ವೆಂಕಟ್ ಸಿಂಗ್ ಅವರು ಮಾತನಾಡಿ, 2005ರಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಪ್ರಥಮ ಬಾರಿಗೆ ಮಾಹಿತಿ ಹಕ್ಕು ಕಾಯ್ದೆ ಯನ್ನು ಜಾರಿಗೊಳಿಸಿ, ಕರ್ನಾಟಕ ಮಾಹಿತಿ ಹಕ್ಕು ಆಯೋಗ ರಚಿಸ ಲಾಯಿತು ಎಂದು ತಿಳಿಸಿದರು.

ಕಳೆದ ಸಾಲಿನ ಫೆಬ್ರವರಿ ಮಾಹೆಯಲ್ಲಿ 6 ಜನರನ್ನು ರಾಜ್ಯದ ವಿವಿಧ ಪೀಠಗಳಿಗೆ ಮಾಹಿತಿ ಆಯೋಗದ ಆಯುಕ್ತರನ್ನು ನೇಮಕಗೊಳಿಸಿ ರಾಜ್ಯ ಸರ್ಕಾರ ಆದೇಶಿಸಿತು. ರಾಜ್ಯದಲ್ಲಿ ಬಾಕಿ ಇದ್ದ 55 ಸಾವಿರ ಪ್ರಕರಣ ಗಳಲ್ಲಿ 20 ಸಾವಿರ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿ, ಪ್ರಸ್ತುತ 35 ಸಾವಿರ ಪ್ರಕರಣಗಳು ಬಾಕಿ ಇವೆ ಎಂದು ಆಯುಕ್ತ ಬಿ.ವೆಂಕಟ ಸಿಂಗ್ ಅವರು ವಿವರಿಸಿದರು.

ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿಗೆ ಕಲಬುರಗಿ ಪೀಠವು ಕಾರ್ಯನಿರ್ವಹಿಸುತ್ತಿದೆ. ಈ ಭಾಗದಲ್ಲಿ ಮಾಹಿತಿ ಕೋರಿ ಸಲ್ಲಿಕೆಯಾದ ಅರ್ಜಿಗಳನ್ನು ಇಲ್ಲಿ ವಿಚಾರಣೆ ನಡೆಸಲಾಗುತ್ತದೆ. ಕಕ ಭಾಗದ ಕಲಬುರಗಿ ಪೀಠದಲ್ಲಿ 2010 ರಿಂದ 2022 ರವರೆಗೆ ಬಾಕಿ ಇದ್ದ 6,600 ಪ್ರಕರಣಗಳನ್ನೂ 2025 ರ ಡಿ.31 ಕ್ಕೆ ಇತ್ಯರ್ಥಗೊಳಿಸಲಾಗಿದೆ. ಇದೇ ಜ.05 ರಿಂದ 2023 ರಿಂದ ಬಾಕಿ ಇರುವ ಪ್ರಕರಣಗಳನ್ನು ಅಂತ್ಯ ಹಾಡಲು ಉದ್ದೇಶಿಸಲಾಗಿದೆ ಎಂದರು.

ಕರ್ನಾಟಕ ಮಾಹಿತಿ ಆಯೋಗದ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಅವರು ಮಾತನಾಡಿ, ನಾಗರಿಕರನ್ನು ಸಬಲೀಕರಣಗೊಳಿಸುವ ಉದ್ದೇಶಕ್ಕಾಗಿಯೇ ಮಾಹಿತಿ ಹಕ್ಕನ್ನು ಜಾರಿಗೊಳಿಸಲಾಗಿದೆ. ಭಾರತದ ಸಂವಿಧಾನದ 19(1)(ಎ) ವಿಧಿಯಡಿ ಇದು ಕೂಡ ಮೂಲಭೂತ ಹಕ್ಕಾಗಿದೆ ಎಂದು ತಿಳಿಸಿದರು.

ಸರ್ಕಾರದ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಹಾಗೂ ಭ್ರಷ್ಟಾಚಾರ ನಿವಾರಣೆಗಾಗಿ ಮಾಹಿತಿ ಹಕ್ಕು ಕಾಯ್ದೆಯನ್ನು ಜಾರಿಗೆ ತರಲಾಗಿದ್ದು, ಮಾಹಿತಿ ಹಕ್ಕು ಕಾಯ್ದೆಯಡಿ ಮಾಹಿತಿ ಕೋರಿ ಅರ್ಜಿ ಸಲ್ಲಿಸುವ ಅರ್ಜಿದಾರರಿಗೆ ಕಾಲಮಿತಿ ಯೊಳಗೆ ಮಾಹಿತಿ ಒದಗಿಸುವುದು ಸಾರ್ವಜನಿಕ ಮಾಹಿತಿ ಅಧಿಕಾರಿಯ ಕರ್ತವ್ಯವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಸುಮಾರು 80 ಸಾವಿರಕ್ಕೂ ಹೆಚ್ಚು ಸಾರ್ವಜನಿಕ ಮಾಹಿತಿ ಪ್ರಾಧಿಕಾರಗಳಿವೆ. ಆಯೋಗ ರಚನೆಯಾದಾಗಿನಿಂದ ರಾಜ್ಯದ ವಿವಿಧ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ-11,444, ಕಂದಾಯ-5,963, ನಗರಾಭಿವೃದ್ಧಿ ಇಲಾಖೆ-4620, ಶಿಕ್ಷಣ ಇಲಾಖೆ-1599, ಲೋಕೋಪಯೋಗಿ ಇಲಾಖೆ-1,365 ಸೇರಿದಂತೆ 34,684 ಪ್ರಕರಣಗಳು ಬಾಕಿ ಇವೆ. ರಾಜ್ಯದಲ್ಲಿ 10,757 ಪ್ರಕರಣಗಳಲ್ಲಿ 10.20 ಕೋಟಿ ರೂ. ದಂಡ ವಿಧಿಸಲಾಗಿದೆ. ಅದರಲ್ಲಿ 3,084 ಅಧಿಕಾರಿಗಳು 2.70 ಕೋಟಿ ರೂ. ದಂಡ ಪಾವತಿ ಸಿದ್ದಾರೆ.

ಅದೇ ರೀತಿಯಾಗಿ ಬಳ್ಳಾರಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ-372, ಕಂದಾಯ-144, ನಗರಾಭಿವೃದ್ಧಿ ಇಲಾಖೆ-42, ಶಿಕ್ಷಣ ಇಲಾಖೆ-38 ಸೇರಿದಂತೆ ಬಳ್ಳಾರಿ ಜಿಲ್ಲೆಯಲ್ಲಿ 769 ಪ್ರಕರಣಗಳು ಬಾಕಿ ಉಳಿದಿವೆ. ಈ ಪೈಕಿ 163 ಪ್ರಕರಣ ದಲ್ಲಿ ಅಧಿಕಾರಿಗಳಿಗೆ 15.45 ಲಕ್ಷ ರೂ. ದಂಡ ವಿಧಿಸಲಾಗಿದ್ದು, 28 ಅಧಿಕಾರಿಗಳಿಂದ 3.58 ಲಕ್ಷ ರೂ. ಪಾವತಿಯಾಗಿದೆ.

ಉಳಿದ ಮೊತ್ತ ವನ್ನು ವಸೂಲಿ ಮಾಡಲು ಕಾರ್ಯದರ್ಶಿಯವರ ಮೂಲಕ ಈಗಾಗಲೇ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಲಾಗಿದೆ ಎಂದು ವಿವರಿಸಿದರು.

ಜಿಲ್ಲಾ ಮತ್ತು ತಾಲ್ಲೂಕು ಕೆಡಿಪಿ (ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ) ಸಭೆಗಳಲ್ಲಿಯೂ ಸಹ ಮಾಹಿತಿ ಹಕ್ಕು ಕಾಯ್ದೆ ಕುರಿತು ವಿಷಯ ಅಳವಡಿಸುವುದರ ಮೂಲಕ ಪ್ರಕ ರಣಗಳ ಅಂಕಿ-ಅಂಶ, ಬಾಕಿ, ಇತ್ಯ ರ್ಥ ಕುರಿತು ಚರ್ಚಿಸಲು ನಿರ್ದೇಶನ ನೀಡಲಾಗುವುದು ಎಂದು ತಿಳಿಸಿ ದರು.

ಇನ್ನೋರ್ವ ಕರ್ನಾಟಕ ಮಾಹಿತಿ ಆಯೋಗದ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ರಾಜಶೇಖರ್.ಎಸ್ ಅವರು ಮಾತನಾಡಿ, ನಾಗರಿಕರನ್ನು ಸಬಲೀಕರಣಗೊಳಿಸುವ ಉದ್ದೇಶಕ್ಕಾ ಗಿಯೇ ಮಾಹಿತಿ ಹಕ್ಕನ್ನು ಜಾರಿಗೊ ಳಿಸಲಾಗಿದೆ. ಭಾರತದ ಸಂವಿಧಾನದ 19(1)(ಎ) ಮತ್ತು ಸಂವಿಧಾನದ 21 ನೇ ವಿಧಿಯಡಿ ಇದು ಕೂಡ ಮೂಲಭೂತ ಹಕ್ಕಾಗಿದೆ ಎಂದು ತಿಳಿಸಿದರು.

ಸ್ವಾತಂತ್ರ್ಯ ಭಾರತದ ಅತ್ಯಂತ ಶಕ್ತಿಶಾಲಿ ಕಾಯ್ದೆ ಆರ್‌ಟಿಐ. ಸರ್ಕಾರದ ನಿರ್ಧಾರಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಜನರಿಗೆ ತಿಳುವಳಿಕೆಯುಳ್ಳ ನಿರ್ಧಾರಗಳನ್ನು ತೆಗೆದುಕೊಳ್ಳಲು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ.

ಎಲ್ಲ ಅಧಿಕಾರಿ ಸಿಬ್ಬಂದಿಗಳು ಮಾಹಿತಿ ಹಕ್ಕು ಕಾಯ್ದೆ ಕುರಿತು ಸಂಪೂರ್ಣ ಅರಿವು ಹೊಂದಿದ್ದಲ್ಲಿ ಮಾಹಿತಿ ಕೋರಿ ಅರ್ಜಿ ಸಲ್ಲಿಸಿದ ಅರ್ಜಿದಾರರಿಗೆ ಸಮರ್ಪಕ ಮಾಹಿತಿ ಒದಗಿಸಲು ಅನುಕೂಲ ವಾಗುತ್ತದೆ ಎಂದು ತಿಳಿಸಿದರು.

ಯಾವುದೇ ಅಧಿಕಾರಿ ಸಿಬ್ಬಂದಿಗಳ ವೈಯಕ್ತಿಕ ಮಾಹಿತಿ ನೀಡಲು ಬರುವುದಿಲ್ಲ. ಮಾಹಿತಿ ಕೋರಿ ಬಂದಂತಹ ಅರ್ಜಿಗಳಲ್ಲಿ ಸಾರ್ವಜನಿಕ ಹಿತಾಸಕ್ತಿ ಇದ್ದಲ್ಲಿ ಅಂತಹ ಅರ್ಜಿಗಳಿಗೆ ಮಾಹಿತಿ ನೀಡಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯಡಿ ಅಧಿಕಾರಿಗಳು ಎದುರಿಸುತ್ತಿರುವ ತೊಂದರೆಗಳನ್ನು ಪರಿಹರಿಸಿಕೊಳ್ಳಲು ಈ ಕಾರ್ಯಾಗಾರವು ತುಂಬಾ ಅನುಕೂಲವಾಗಿದ್ದು, ಇಂತಹ ಕಾರ್ಯಾಗಾರದಲ್ಲಿ ಅಧಿಕಾರಿಗಳು ಭಾಗವಹಿಸಿ ತಮಗಿರುವ ಗೊಂದಲಗಳಿಗೆ ಮಾಹಿತಿ ಪಡೆದುಕೊಳ್ಳುವ ಮೂಲಕ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಶಾಸಕ ಗಾಲಿ ಜನಾರ್ದನ ರೆಡ್ಡಿ, ಮಾಜಿ ಸಂಸದ ಶ್ರೀ ರಾಮುಲು ಹತ್ಯೆಗೆ ಸಂಚು

ಶಾಸಕ ಭರತ ರೆಡ್ಡಿ ಮತ್ತು ಸಹಚರರನ್ನು ಬಂಧಿಸುವಂತೆ ಒತ್ತಾಯ



ಗಂಗಾವತಿ,ಜ.04-

ಶಾಸಕ ಜನಾರ್ಧನ ರೆಡ್ಡಿ ಮತ್ತು ಮಾಜಿ ಸಚಿವ ಬಿ.ಶ್ರೀರಾಮುಲು ರವರನ್ನ ಹತ್ಯೆಗೆ ಸಂಚು ರೂಪಿಸಿ ತಮ್ಮ ಬೆಂಬಲಿಗರ ಅಂಗ ರಕ್ಷಕರಿಂದ ಗೋಲಿ ಬಾರ್ ಮಾಡಿಸಿದ ಬಳ್ಳಾರಿ ಶಾಸಕ ನಾರಾ ಭರತ್ ರೆಡ್ಡಿ ಮತ್ತು ಆತನ ಸಹ ಚರರನ್ನು ಕೂಡಲೇ ಬಂಧಿಸಬೇಕೆ ಂದು ಮಾಜಿ ಸಂಸದ ಶಿವರಾಮು ಗೌಡ, ಮಾಜಿ ಶಾಸಕ ಪರಣ್ಣ ಮುನ ವಳ್ಳಿ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದರು.

ಶಾಸಕ ಜನಾರ್ಧನ ರೆಡ್ಡಿಯವರ ಬಳ್ಳಾರಿಯಲ್ಲಿರುವ ಮನೆ ಮುಂದೆ ಬ್ಯಾನರ್ ಕಟ್ಟುವ ಕಾದಾಟದಲ್ಲಿ ನಡೆದ ಗೋಲಿ ಬಾರ್ ಪ್ರಕರಣದ ಹಿನ್ನೆಲೆಯಲ್ಲಿ ಶನಿವಾರ ನಗರದ ಬಿಜೆಪಿ ಕಚೇರಿಯಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಬಳ್ಳಾರಿ ಗೋಲಿ ಬಾರ್ ಪ್ರಕರಣವನ್ನು ತೀವ್ರವಾಗಿ ಖಂಡಿಸಿ ಈ ಪ್ರಕರಣ ನಡೆಯಲು ಮೂಲ ಕಾರಣೀಕರ್ತರಾದ ಶಾಸಕ ಭರತ್ ರೆಡ್ಡಿ ಸೇರಿದಂತೆ ಆತನ ಬೆಂಬಲಿಗರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು. ಮತ್ತು ಶಾಸಕ ಜನರ್ಧನ ರೆಡ್ಡಿ ಹಾಗೂ ಬಿ.ಶ್ರೀರಾಮುಲುರವರಿಗೆ ಸರ್ಕಾರ ಸೂಕ್ತ ಭದ್ರತೆ ನೀಡಬೇಕೆಂದು ಒತ್ತಾಯಿಸಿದರು.

ಕ್ರಿಮಿನಲ್ ಹಿನ್ನೆಲೆ ಇರುವ ಕುಟುಂಬದಿಂದ ಬಂದ ನಾರಾ ಭರತ್ ರೆಡ್ಡಿ ಮಹರ್ಷಿ ವಾಲ್ಮೀಕಿ ಪುತ್ಥಳಿ ಉದ್ಘಾಟನೆ ಕಾರ್ಯಕ್ರಮದ ಬ್ಯಾನರ್ ಕಟ್ಟುವ ನೆಪದಲ್ಲಿ ಗಲಭೆ ಎಬ್ಬಿಸಿ ಜನಾರ್ಧನ ರೆಡ್ಡಿ ಮತ್ತು ಶ್ರೀರಾಮುಲರನ್ನ ಹತ್ಯೆಗೈಯಲು ತಮ್ಮ ಬೆಂಬಲಿಗರ ಖಾಸಗಿ ಅಂಗ ರಕ್ಷಕರಿಂದ 9 ಬಾರಿ ಗೋಲಿ ಬಾರ್ ಮಾಡಿಸಿದ್ದು ಸೂಕ್ತ ಪ್ರತ್ಯಕ್ಷ ಸಾಕ್ಷಾಧಾರಗಳು ಸರ್ಕಾರಕ್ಕೆ ಲಭ್ಯವಾಗಿವೆ. ಅಲ್ಲದೇ ನಾರಾ ಭರತ್ ರೆಡ್ಡಿ ತಾವುಮನಸ್ಸು ಮಾಡಿದರೆ ಇಡಿ ಬಳ್ಳಾರಿಯನ್ನು ಮತ್ತು ಜನಾರ್ಧನ ರೆಡ್ಡಿ ನಿವಾಸವನ್ನು ಸುಟ್ಟು ಹಾಕುಬಲ್ಲೆ ಎಂದು ದ್ವೇಷ ಮತ್ತು ಪ್ರಚೋಧನಕಾರಿ ಭಾಷಣ ಮಾಡಿದ್ದಾರೆ. ರಾಜ್ಯ ಸರ್ಕಾರವೇ ಇತ್ತೀಚಿಗೆ ತಂದ ದ್ವೇಷ ಭಾಷಣ ಮಸೂದೆಯಡಿ ತಕ್ಷಣ ಭರತ್ ರೆಡ್ಡಿಯನ್ನು ಬಂಧಿಸುವ ಮೂಲಕ ಈ ಮಸೂದೆಗೆ ಆಧ್ಯತೆ ನೀಡಬೇಕೆಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ವಿರು ಪಾಕ್ಷಪ್ಪ ಸಿಂಗನಾಳ, ಬಿಜೆಪಿ ಗ್ರಾಮೀ ಣ ಮಂಡಲ ಅಧ್ಯಕ್ಷ ದುರಗಪ್ಪ ಆಗೋಲಿ, ನಗರ ಮಂಡಲ ಅಧ್ಯಕ್ಷ ಚಂದ್ರಶೇಖರ ಹೀರೂರ, ಮುಖಂ ಡರಾದ ಹೆಚ್.ಗಿರೇಗೌಡ, ಮನೋ ಹರಗೌಡ ಹೇರೂರ, ಜೋಗದ ಹನುಮಂತಪ್ಪ ನಾಯಕ, ರಾಘ ವೇಂದ್ರ ಶೆಟ್ಟಿ, ಮೌಲಾಸಾಬ್, ಸೈಯ ದ್ ಅಲಿ, ರಮೇಶ ಚೌಡ್ಕಿ, ಸಂಗಯ್ಯ ಸ್ವಾಮಿ ಸಂಶಿಮಠ, ಕಾಶಿನಾಥ ಚಿತ್ರ ಗಾರ, ಚನ್ನಪ್ಪ ಮಳಗಿ ಅನೇಕರಿದ್ದರು.

ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರ ಪ್ರವಾಸ ಕಾರ್ಯಕ್ರಮ

ಬಳ್ಳಾರಿ,ಜ.04-

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಜ.04 ರಂದು ಬಳ್ಳಾರಿ ಪ್ರವಾಸ ಕೈಗೊಂಡಿದ್ದಾರೆ.

ಜ.04 ರಂದು ಮಧ್ಯಾಹ್ನ 12 ಗಂಟೆಗೆ ಬಳ್ಳಾರಿ ತಾಲ್ಲೂಕಿನ ಬೆಳಗಲ್ ಗ್ರಾಮದಲ್ಲಿ ಕರ್ನಾಟಕ ಗಣಿಭಾದಿತ ಪುನಃಶ್ಚೇತನ ಅಭಿವೃದ್ಧಿ ನಿಗಮ ಯೋಜನೆಯಡಿ ಗಣಿಭಾದಿತ ಬಳ್ಳಾರಿ ತಾಲ್ಲೂಕಿನ 10 ಗ್ರಾಮಗಳ 862 ವಸತಿ ರಹಿತರಿಗೆ ವಸತಿ ಒದಗಿಸಲು ಯೋಜನೆಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಮಧ್ಯಾಹ್ನ 12.30 ಕ್ಕೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಅಂತರಾಷ್ಟ್ರೀಯ ವಾಣಿಜ್ಯ ಮೇಳ 2026 ರ ಅಂಗವಾಗಿ ರಾಷ್ಟ್ರೀಯ ಆಹಾರ ಭದ್ರತಾ ಹಾಗೂ ಆತ್ಮ ಯೋಜನೆಯಡಿ ಜಿಲ್ಲಾ ಮಟ್ಟ ತಾಂತ್ರಿಕ ಕಾರ್ಯಾಗಾರ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಸಚಿವರು ಮಧ್ಯಾಹ್ನ 01 ಗಂಟೆಗೆ ಬಳ್ಳಾರಿಯಿಂದ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಬಳ್ಳಾರಿ ಗಲಭೆ ಪ್ರಕರಣ ಸಿಐಡಿ ತನಿಖೆಗೆ ಪರಿಶೀಲನೆ

ನೀಡಿದ್ದಾರೆ. ಎರಡು ದೂರನ್ನೂ ಆಧರಿಸಿ ತನಿಖೆ ನಡೆಸಲಾಗುತ್ತಿದೆ. ಘಟನೆಯಲ್ಲಿ ಪೆಟ್ರೋಲ್ ಬಾಂಬ್ ಬಳಕೆಯಾಗಿದ್ದರೇ ಅದನ್ನು ತನಿಖೆ ನಡೆಸಲಾಗುತ್ತದೆ ಎಂದು ತಿಳಿಸಿದರು.

ಜನಾರ್ದನ ರೆಡ್ಡಿ ಅವರು ಬಳ್ಳಾರಿಗೆ ಬರುವ ಮುನ್ನ ಅಲ್ಲಿ ಯಾವುದೇ ಗಲಾಟೆಗಳಾಗಿರಲಿಲ್ಲ. ಅವರು ಬಂದ ಬಳಿಕ ಗಲಾಟೆಗಳಾಗುತ್ತಿವೆ. ಇದು ಕಾಕತಾಳೀಯ ಇರಬಹುದು ಎಂದರು.

ಘಟನೆಗೆ ಸಂಬಂಧಪಟ್ಟಂತೆ ತಕ್ಷಣವೇ ಬಳ್ಳಾರಿಯಿಂದ ವರ್ಗಾವಣೆಯಾದ ಕಾರಣಕ್ಕಾಗಿ ಅಲ್ಲಿನ ಜಿಲ್ಲಾ ಪೊಲೀಸ್ ಮುಖ್ಯ ಅಧಿಕಾರಿಯವರಿಗೆ ಬೇಸರ ಇರಬಹುದು. ಅವರು ಅಲ್ಲಿಂದ ಬೆಂಗಳೂರಿಗೆ ಬರುವ ಹಾದಿಯಲ್ಲಿ ಸ್ನೇಹಿತರ ಫಾರಂ ಹೌಸ್ ನಲ್ಲಿ ವಿಶ್ರಾಂತಿ ಪಡೆದು, ಈಗ ಬೆಂಗಳೂರಿಗೆ ಬಂದಿದ್ದಾರೆ ಎಂದು ಮನೆಯವರಿಗೆ ಮಾಹಿತಿ ಇದೆ ಎಂದು ತಿಳಿಸಿದರು.

ಬಳ್ಳಾರಿಯ ಘಟನೆ ಬಳಿಕ ಖಾಸಗಿ ವ್ಯಕ್ತಿಗಳಿಗೆ ಬಂದೂಕು ನೀಡುವ ಪರವಾಗಿಯ ನಿಯಮಗಳನ್ನು ಬಿಗಿಗೊಳಿಸುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈಗಾಗಲೇ ರಾಷ್ಟ್ರಮಟ್ಟದಲ್ಲಿ ಈ ಬಗ್ಗೆ ನಿಯಮಗಳಿವೆ. ರಾಜ್ಯ ಸರ್ಕಾರ ಅದನ್ನು ಅಳವಡಿಸಿಕೊಂಡಿದೆ. ಮತ್ತಷ್ಟು ಸುಧಾರಣೆಯ ಅಗತ್ಯ ಇದ್ದರೆ ನಾವು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುತ್ತೇವೆ ಅದು ರಾಷ್ಟ್ರಮಟ್ಟದಲ್ಲಿಯೇ ಬದಲಾಗಬೇಕು ಎಂದು ಹೇಳಿದರು.

ಕಿದ್ವಾಯಿ ಫೆರಿಫೆರಲ್ ಕ್ಯಾನ್ಸರ್ ಚಿಕಿತ್ಸಾ ಘಟಕದ ಕಟ್ಟಡ ಕಾಮಗಾರಿಗೆ ಸಚಿವರಿಂದ ಶಂಕುಸ್ಥಾಪನೆ

ಆಸ್ಪತ್ರೆ ಆವರಣದಲ್ಲಿನ ಎಲ್ಲ ರಸ್ತೆಗಳನ್ನು ಸರಿಪಡಿಸಲಾಗಿದೆ. ಇಂತಹ ಅಭಿವೃದ್ದಿ ಕಾರ್ಯಗಳು ನಿರಂತರ ನಡೆಯುತ್ತಿವೆ ಎಂದು ತಿಳಿಸಿದರು.

ಬಡ ಮಕ್ಕಳಿಗೆ ಸಹ ವೈದ್ಯಕೀಯ ಶಿಕ್ಷಣ ಸಿಗಬೇಕು ಎಂದು ಆಲೋಚಿಸಿ ನಾವು ಈಗಾಗಲೇ ರಾಜ್ಯದಲ್ಲಿ 22 ಸರ್ಕಾರಿ ಮೆಡಿಕಲ್ ಕಾಲೇಜ್ ಸ್ಥಾಪನೆ ಮಾಡಿದ್ದೇವೆ. ಈ ಬಾರಿಯ ಬಜೆಟನಲ್ಲಿ ಮತ್ತೆ 3 ಮೆಡಿಕಲ್ ಕಾಲೇಜ್ ನಿರ್ಮಾಣದ ಘೋಷಣೆ ಮಾಡಿದ್ದೇವೆ ಎಂದರು.

ಯುನಿವರ್ಸಲ್ ಹೆಲ್ತ್ ಕವರೇಜ್ ದೂರದೃಷ್ಟಿಯ ವಿಚಾರದಡಿಯಲ್ಲಿ ನಾವು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಕ್ಯಾನ್ಸರ್ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣದಂತ ಕಾರ್ಯ ಯೋಜನೆ ಹೊಂದಿದ್ದೇವೆ ಎಂದು ಸಚಿವರು ತಿಳಿಸಿದರು.

ಅಜಿಂ ಪ್ರೇಮಜಿ ಅವರ ಸಹಯೋಗದಲ್ಲಿ ಒಂದು ವಿಶೇಷ ಆಸ್ಪತ್ರೆಯನ್ನು ಮುಂದಿನ ಮೂರು ವರ್ಷದೊಳಗೆ ನಿರ್ಮಾಣ ಮಾಡಲು ಯೋಜಿಸಲಾಗಿದೆ. ರಾಜ್ಯ ಸರ್ಕಾರವು ಆರೋಗ್ಯ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಿದೆ. ಜನತೆ ಆರೋಗ್ಯ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ರಾಯಚೂರು ಜಿಲ್ಲೆಯ ಜನತೆಯಲ್ಲಿ ಸಚಿವರು ಮನವಿ ಮಾಡಿದರು.

ಸಮಾರಂಭದಲ್ಲಿ ಶಾಸಕರಾದ ಬಸನಗೌಡ ದದ್ದಲ್, ಎ ವಸಂತಕುಮಾರ, ಮುಖಂಡರಾದ ಪವನ ಕಿಶೋರ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಎಸ್ಪಿ ಅರುಣಾಂಕ್ಷು ಗಿರಿ, ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ನಿರ್ದೇಶಕರಾದ ಡಾ.ನವೀನ್ ಟಿ., ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ರಿಮ್ಸ್ ನಿರ್ದೇಶಕರಾದ ಡಾ.ರಮೇಶ ಬಿ ಎಚ್., ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನಿರ್ದೇಶಕರಾದ ಡಾ.ರಮೇಶ ಸಿ ಸಾಗರ, ರಿಮ್ಸ್ ನ ಮುಖ್ಯ ಆಡಳಿತಾಧಿಕಾರಿ ಡಾ.ಗುರುಸಿದ್ದಯ್ಯ, ಆರ್ಥಿಕ ಅಧಿಕಾರಿ ಚನ್ನಮ್ಮ, ಡಿಎಚ್‌ಓ ಡಾ.ಸುರೇಂದ್ರಬಾಬು ಹಾಗು ಇತರರು ಇದ್ದರು. ಡಾ.ದಂಡಪ್ಪ ಬಿರಾದಾರ ನಿರೂಪಿಸಿದರು. ಡಾ.ಡಾ.ಡಿ.ಮಂಡೋಲಿಕರ ವಂದಿಸಿದರು.

ರುದ್ರಭೂಮಿ ಮಂಜೂರಿಗೆ ಸಚಿವರಿಗೆ ಮನವಿ

ವಿಶಾಲವಾಗಿ ವ್ಯಾಖ್ಯಾನಿಸಿದೆ. ಮತ್ತು ಈ ಹಕ್ಕು ಮರಣದ ನಂತರವು ಅನ್ವಯಿಸುತ್ತದೆ. ಮೃತದೇಹಗಳನ್ನು ಗೌರವದಿಂದ ನಡೆಸಿಕೊಳ್ಳಲಾಗುತ್ತಿದೆ. ಮತ್ತು ಕುಟುಂಬಗಳು ಅವರ ಧಾರ್ಮಿಕ ಸಂಪ್ರದಾಯಗಳ ಪ್ರಕಾರ ಅಂತಿಮ ವಿಧಿಗಳನ್ನು ಮಾಡಬಹುದು ಎಂದು ಖಚಿತಪಡಿಸಿದೆ. ಈ ವಿಷಯವನ್ನು ಪರಿಗಣಿಸಿ ಕೂಡಲೇ ಜಿಲ್ಲೆಯ ಎಲ್ಲಾ ತಾಲೂಕ ಹಾಗೂ ಹೋಬಳಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಗರ, ಪಟ್ಟಣ ಮತ್ತು ಗ್ರಾಮಗಳಲ್ಲಿ ದಲಿತರಿಗೆ ಈಗ ಇರುವ ರುದ್ರಭೂಮಿಗಳನ್ನು ಪರಿಶೀಲಿಸಿ ಅಥವಾ ಇಲ್ಲವಾದಲ್ಲಿ ಹೊಸದಾಗಿ ರುದ್ರಭೂಮಿಗಳನ್ನು ಮಂಜೂರು ಮಾಡಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಬೇಕು, ಈಗ ಇರುವ ರುದ್ರಭೂಮಿಗಳನ್ನು ಪರಿಶೀಲಿಸಿ ಅತಿಕ್ರಮಣ ತೆರವುಗೊಳಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ರುದ್ರಭೂಮಿ ಅಭಿವೃದ್ದಿಪಡಿಸಬೇಕೆಂದು ಸರಕಾರಕ್ಕೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಭಾಸ್ಕರ್ ರಾಜ್ ಜಿಲ್ಲಾ ಸಂಚಾಲಕರು ಕೆ.ಸಂತೋಷ ಮಂಗಳಾರಪೇಟೆ ಬಿ. ಶ್ರೀನಿವಾಸ್ ಸರ್ತಿಗೇರಿ ಮಂಜುನಾಥ್ ಆಸ್ಕಿಹಾಳ ಸೇರಿದಂತೆ ಉಪಸ್ಥಿತರಿದ್ದರು.

ರಾಯಚೂರು ಮಹಾನಗರ ಪಾಲಿಕೆ ಖರೀದಿಸಿದ ಸ್ವಚ್ಛತಾ ವಾಹನಗಳಿಗೆ ಸಚಿವರಿಂದ ಚಾಲನೆ

ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿರಾಯಚರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್,ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ,ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಪಾಲಿಕೆಯ ಅಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ಇತರರು ಇದ್ದರು.

ಬಳ್ಳಾರಿ ಗಲಭೆ ತನಿಖೆಯನ್ನು ಸಿಐಡಿಗೆ ವಹಿಸಲು ಚರ್ಚೆ: ಸತೀಶ ಜಾರಕಿಹೊಳಿ

ಬಂದಾಗ ನೋಡೋಣ. ಕ್ರಿಕೆಟ್‌ನಲ್ಲಿ ನಾನು ಬ್ಯಾಟಿಂಗ್ ಚೆನ್ನಾಗಿ ಆಡುತ್ತೇನೆ. ಅದೇ ರೀತಿ ರಾಜಕೀಯದಲ್ಲೂ ಗೂಗ್ಲಿ ಬಾಲ್ ಹಾಕಲೇಬೇಕು. ಇಲ್ಲವಾದರೆ ಯಶಸ್ಸು ಸಿಗುವುದಿಲ್ಲ ಎಂದು ಸುದ್ದಿಗಾರರ ಪ್ರಶ್ನೆಗೆ ಸತೀಶ್ ಮಾರ್ಮಿಕವಾಗಿ ಉತ್ತರಿಸಿದರು. ನರೇಗಾ ಸ್ವರೂಪವನ್ನು ಬದಲಾಯಿಸಿ ಜಿರಾಮ್ ಜಿ ಎಂದು ನಾಮಕರಣ ಮಾಡಿರುವುದು ಬಡವರ ವಿರೋಧಿ ಕ್ರಮ. ಮೊದಲು ಪಂಚಾಯ್ತಿ ಮಟ್ಟದಲ್ಲಿ ಅಧಿಕಾರ ಇತ್ತು. ಈಗ ದೆಹಲಿಯಲ್ಲಿ ಅಧಿಕಾರ ಕೇಂದ್ರೀಕೃತವಾಗಿದೆ. ಯೋಜನೆಗೆ ಕೇಂದ್ರದ ಪಾಲೇ ಹೆಚ್ಚಿದೆ. ಯಾವ ಪಂಚಾಯ್ತಿಗೆ ಹಣ ಬಿಡುಗಡೆ ಮಾಡಬೇಕು ಎಂಬ ತೀರ್ಮಾನ ಅವರದ್ದು. ನಮ್ಮ(ರಾಜ್ಯ ಸರ್ಕಾರ) ಬಲ ಹೆಚ್ಚಿಲ್ಲ. ಹೇಗೆ ವಿರೋಧ ಮಾಡೋದು? ಆದರೂ ವಿರೋಧ ಮಾಡಲೇಬೇಕು ಹೀಗಾಗಿ ಮಾಡುತ್ತಿದ್ದೇವೆ ಎಂದರು.

ರಾಯಚೂರು ಜಿಲ್ಲಾ ಉತ್ಸವದ ಪ್ರಯುಕ್ತ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

ಬಾದರ್ಲಿ, ಜಿಲ್ಲಾಧಿಕಾರಿ ನಿತಿಶ್ ಕೆ., ಮಹಾನಗರ ಪಾಲಿಕೆಯ ಆಯುಕ್ತ ಜುಬೀನ್ ಮೊಹಪಾತ್ರ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ಕಾಂಗ್ರೆಸ್ ಮುಖಂಡ ಅಸ್ಲಂ ಪಾಶ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಆಡಿ ಗಮನ ಸೆಳೆದ ಸಚಿವರು! ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿರುವ ಕ್ರಿಕೆಟ್ ಪಂದ್ಯಾವಳಿ ಚಾಲನೆ ನೀಡಿದ ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಬ್ಯಾಟಿಂಗ್ ಗೆ ಇಳಿದಾಗ ಸಚಿವ ಎನ್.ಎಸ್. ಬೋಸರಾಜು ಬೌಲಿಂಗ್ ಮಾಡಿ ಗಮನ ಸೆಳೆದರು.

ಬಳಿಕ ಸಚಿವರಿಗೆ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ಎಸ್ ಅರುಣ್ಗೆಶ್ ಗಿರಿ ಬೌಲಿಂಗ್ ಮಾಡಿದರು.

ಮಟಮಾರಿಯಲ್ಲಿ ವಿಜೃಂಭಣೆಯೊಂದಿಗೆ ನಡೆದ ಶ್ರೀ ವೀರಭದ್ರೇಶ್ವರ ರಥೋತ್ಸವ

ಜನಸಾಮಾನ್ಯರ ಭಕ್ತಿಯನ್ನು ಸಾರುವ ಅದ್ಭುತ ಪರಂಪರೆ ಎಂದು ಹೊರಹೊಮ್ಮಿತು. ಸಮಾಜದಲ್ಲಿ ಐಕ್ಯತೆ, ಸೌಹಾರ್ದತೆ ಮತ್ತು ಸಾಂಸ್ಕೃತಿಕ ವೈಭವವನ್ನು ಪ್ರೋತ್ಸಾಹಿಸುವ ಸಂದೇಶವನ್ನು ಈ ರಥೋತ್ಸವವು ವ್ಯಾಪಕವಾಗಿ ಹರಡಿತು.

ಭಾನುವಾರದ ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರು – ಶಂಕರಗೌಡ ಮಿರ್ಜಾಪುರ, ಜಗದೀಶ ವಕೀಲ, ವೀರನಗೌಡ ಬುರೆಡ್ಡಿ, ಅಚ್ಯುತ್ ರೆಡ್ಡಿ, ವರಪ್ರಸಾದ ಗೌಡ, ಮಹಾಂತೇಶ ಮುಕ್ತಿ, ಮಲ್ಲಿಕಾರ್ಜುನ ಬಿ. ಬಸನಗೌಡ, ಸಿದ್ದನಗೌಡ ನೆಲಹಾಳ, ಜೆ. ಮಲ್ಲೇಶ್ ನಾಯಕ, ವಿಷ್ಣು ರೆಡ್ಡಿ, ಸುರೇಶ್ ಗೌಡ ಹಾಗೂ ರಾಯಚೂರು ಗ್ರಾಮೀಣ ವಿಭಾಗದ ಹಲವಾರು ನಾಯಕರು – ಪಾಲ್ಗೊಂಡು ದೇವರ ದರ್ಶನ ಪಡೆದರು ಮತ್ತು ಭಕ್ತರಿಗೆ ಪ್ರೇರಣೆಯಾಗಿ ಸೇವೆ ಸಲ್ಲಿಸಿದರು.

ಮಟಮಾರಿ ಶ್ರೀ ವೀರಭದ್ರೇಶ್ವರ ರಥೋತ್ಸವವು ಗ್ರಾಮೀಣ ಸಂಸ್ಕೃತಿಯ ವೈಭವವನ್ನು ಪ್ರತಿಬಿಂಬಿಸುವ ಸಾಂಪ್ರದಾಯಿಕ, ಧಾರ್ಮಿಕ ಮತ್ತು ಸಾಮಾಜಿಕ ಮಹೋತ್ಸವವೆಂದು ಯಶಸ್ವಿಯಾಗಿ ಸ್ಮರಿಸಲಾಗುವುದು.

ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಾರ್ಯಾಗಾರ । ವರ್ಚ್ಯೂವಲ್ ಮೂಲಕ ಸಂವಾದ


ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮುಖ್ಯ : ಸಿಇಓ ಕುರೇರ

ಬಾಗಲಕೋಟೆ ,ಜ.04-

ಭಯವಿಲ್ಲದೇ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿದಲ್ಲಿ ಉತ್ತಮ ಅಂಕ ಪಡೆಯಲು ಸಾಧ್ಯವಾಗುತ್ತದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಪೂರ್ವ ಸಿದ್ದತೆಗಾಗಿ ವಿದ್ಯಾರ್ಥಿಗಳನ್ನು ಶಾಲಾ ಹಂತದಲ್ಲಿ ಶೈಕ್ಷಣಿಕವಾಗಿ ಪ್ರೇರೇಪಿಸುವ ನಿಟ್ಟನಲ್ಲಿ ಇತ್ತೀಚೆಗೆ ಹಮ್ಮಿಕೊಂಡ ಶೈಕ್ಷಣಿಕ ಕಾರ್ಯಾಗಾರದಲ್ಲಿ ವಿಡಿಯೋ ವರ್ಚ್ಯೂವಲ್‌ಮೂಲಕ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು ಭಯ, ಆತಂಕವನ್ನು ಬಿಟ್ಟು ಮನಸ್ಸು ಗಟ್ಟಿಗೊಳಿಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳಲ್ಲಿ ಗುರಿ, ಕನಸು ಇಟ್ಟುಕೊಂಡು ಉತ್ತರ ಕೊಡುವ ರೀತಿಯಲ್ಲಿ ಪರೀಕ್ಷೆಗೆ ತಯಾರಾಗಬೇಕಾಗುತ್ತದೆ. ಪರೀಕ್ಷೆ ಎಂದರೆ ಭಯ ಇರಬೇಕು ಆದರೆ ಅದನ್ನು ಸರಿಪಡಿಸಿಕೊಂಡು ತಯಾರಿ ಮುಂದುವರಿಸಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆ ಜೀವನದ ಮೊದಲ ಹೆಜ್ಜೆಯಾಗಿದ್ದು, ನಂಬಿಕೆ ಇಟ್ಟುಕೊಂಡು ಪರೀಕ್ಷೆಗೆ ತಯಾರಾಗಬೇಕು. ಪರೀಕ್ಷೆಯಲ್ಲಿ



ಅಂಕಗಳು ಗುರುತು ಮಾತ್ರ ಆದರೆ ನೀವು ಪಟ್ಟ ಪರಿಶ್ರಮ ಕಂಡಿತ 'ವಾಗಿಯೂ ಯಶಸ್ಸು ಸಿಗುತ್ತದೆ ಎಂದರು.

ನಮ್ಮಲ್ಲಿರುವ ಸಮಯ ಪರಿಪಾಲನೆ ಮುಖ್ಯವಾಗಿದ್ದು, ಶಿಸ್ತು ಬೆಳೆಸಿಕೊಂಡು ಸಮಯದ ಸದುಪಯೋಗ ಪಡಿಸಿಕೊಳ್ಳಲು ಮುಂದಾಗಬೇಕು. ವಿಷಯಗಳನ್ನು ಏಕಾಗ್ರತೆಯಿಂದ ಅರ್ಥವಾಗುವ ರೀತಿಯಲ್ಲಿ ಅಬ್ಯಾಸ ಮಾಡಬೇಕು. ಎಷ್ಟು ಸಮಯದ ಓದಿದ್ದೇನೆ ಎಂಬುದು ಮುಖ್ಯವಲ್ಲ. ಎಷ್ಟು ಓದಿ ತಿಳಿದುಕೊಂಡಿದ್ದೇನೆ ಎಂಬುದು ಮುಖ್ಯವಾಗುತ್ತದೆ. ಓದಿರುವ ಶಬ್ದಗಳು ನೆನಪಿನಲ್ಲಿಟ್ಟುಕೊಂಡಾಗ ಆ ಶಬ್ದಗಳ ಮೂಲಕ ಈಡೀ ಚಿತ್ರಣ ತಮ್ಮ ಕಣ್ಣ ಮುಂದೆ ಬರುವಂತಾಗಬೇಕು. ಆ ರೀತಿಯಲ್ಲಿ ಅಭ್ಯಾಸ ಮಾಡಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕೆಲವೊಂದು ವಿದ್ಯಾರ್ಥಿಗಳಲ್ಲಿ ಎಷ್ಟು ಓದಿದರು ನೆನಪಿನಲ್ಲಿ ಒಟ್ಟುಕೊಳ್ಳಲು ಸಾಧ್ಯವಾಗುತ್ತಿರುವದಿಲ್ಲ. ಅಂತಹ ವಿದ್ಯಾರ್ಥಿಗಳು ಪ್ರಾರಂಭದಲ್ಲಿಯೇ ವಿಷಯಗಳನ್ನು ಅರಿತುಕೊಂಡು ನಂತರ ಮರಳಿ ಆ ವಿಷಯಗಳನ್ನು ಓದುವ ಮೂಲಕ ನೆನಪಿನಲ್ಲಿ ಒಟ್ಟುಕೊಳ್ಳುವ ಕೆಲಸವಾಗಬೇಕು. ಈಗಾಗಲೇ ಶಿಕ್ಷಕರು ವಿದ್ಯಾರ್ಥಿಗಳನ್ನು ತಯಾರು ಮಾಡುವಲ್ಲಿ ಎಲ್ಲ ರೀತಿಯ ಪ್ರಯತ್ನ ಮಾಡಿದ್ದಾರೆ ಹಾಗೂ ಮಾಡುತ್ತಿದ್ದಾರೆ. ಬರುವ ಪರೀಕ್ಷೆಯಲ್ಲಿ ಭಯ ಆತಂಕವನ್ನು ಬಿಟ್ಟು ಪರೀಕ್ಷೆ ಎದುರಿಸಲು ವಿದ್ಯಾರ್ಥಿಗಳು ತಯಾರಾಗಬೇಕಿದೆ ಎಂದರು.

ವರ್ಚ್ಯೂವಲ್ ಮೂಲಕ ಹಮ್ಮಿಕೊಂಡ ಶೈಕ್ಷಣಿಕ ಕಾರ್ಯಾಗಾರದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಜಿ.ಮನ್ನಿಕೇರಿ, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಎಸ್.ಎಸ್.ಹಾಲವರ ಸೇರಿದಂತೆ ಆಯಾ ಶಾಲಾ ಮುಖ್ಯೋಪಾಧ್ಯಾಯರು ಭಾಗವಹಿಸಿದ್ದರು.

ಪ್ರಥಮ ಮುದ್ರಣಗೊಂಡ ಪುಸ್ತಕ ನೋಂದಣಿಗೆ ಸೂಚನೆ

ಬೀದರ, ಜ.04-

2025ರಲ್ಲಿ ರಾಜ್ಯದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿಗೆ ಪ್ರತಿ ಶೀರ್ಷಿಕೆ ಮೂರು ಪ್ರತಿಗಳನ್ನು ಮುಫತ್ತಾಗಿ ಸಲ್ಲಿಸಿ ದಿನಾಂಕ:31-01-2026 ಸಂಜೆ 5.30 ರೊಳಗಾಗಿ ನೋಂದಣಿ ಮಾಡಿಸತಕ್ಕದ್ದು, ನೋಂದಣಿಯಾದ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುತ್ತದೆಂದು ಬೀದರ ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ (ಪ್ರ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊರ ರಾಜ್ಯಗಳಲ್ಲಿ 2025ರಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ/ ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ನೋಂದಣಿ ಪ್ರಮಾಣ ಪತ್ರದ ನಕಲು ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ ಒಂದು ಪ್ರತಿಯನ್ನು ದಿನಾಂಕ: 31-01-2026ರ ಸಂಜೆ 5.30ರ ಒಳಗಾಗಿ ಆಯ್ಕೆಗಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು, ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸಬಹುದು.

ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ವೆಬ್‌ಸೈಟ್ ಅಥವಾ ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿ, ಜಿಲ್ಲಾ ಕೇಂದ್ರ ಗ್ರಂಥಾಲಯ ಬೀದರ ಇಲ್ಲಿ ಅಥವಾ ಈ ಕಛೇರಿಯ ದೂರವಾಣಿ 08482 226401 ಗೆ ಸಂಪರ್ಕಿಸಲು ಅವರು ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಮಕ್ಕಳ ರಕ್ಷಣೆ ಅರಿವು ಕಾರ್ಯಕ್ರಮ ಉದ್ಘಾಟನೆ

ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಹೊಣೆ-ನ್ಯಾ.ರಾಜೇಶ್ ಎನ್.ಹೊಸಮನೆ



ಬಳ್ಳಾರಿ,ಜ.04

ಸಮಾಜದ ಪ್ರತಿ ಮಗುವಿಗೂ ಮೂಲಭೂತ ಸೌಲಭ್ಯ ಒದಗಿಸುವುದರ ಜೊತೆಗೆ ಅವರಿಗಿರುವ ಹಕ್ಕುಗಳ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಮಕ್ಕಳ ಹಕ್ಕುಗಳ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ವಿಕಲಚೇತನರ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಹಾಗೂ ಗ್ರಾಮೀಣ ಮತ್ತು ನಗರ ಪುನರ್ವಸತಿ ಕಾರ್ಯಕರ್ತರಿಗೆ ನಗರದ ಜಿಲ್ಲಾಡಳಿತ ಆವರಣದ ಸರ್ಕಾರಿ ನೌಕರರ ಭವನದಲ್ಲಿ ಶನಿವಾರ ಆಯೋಜಿಸಿದ್ದ ಮಕ್ಕಳ ರಕ್ಷಣೆ ವಿಷಯದ ಕುರಿತು ಜಿಲ್ಲಾ ಮಟ್ಟದ ಒಂದು ದಿನದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ರಕ್ಷಣೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರವು ಹಲವು ಯೋಜನೆಗಳನ್ನು ಜಾರಿಗೊಳಿಸಿ ಹೆಚ್ಚಿನ ಒತ್ತು ನೀಡುತ್ತಿದ್ದು, ಆದರೆ ಇತ್ತೀಚೆಗೆ ನಡೆಯುತ್ತಿರುವ ಮಕ್ಕಳ ದೌರ್ಜನ್ಯ ಸೇರಿದಂತೆ ಇನ್ನಿತರೆ ಅನೈತಿಕ ಚಟುವಟಿಕೆಗಳಿಗೆ ಮಕ್ಕಳನ್ನು ಬಳಸಿಕೊಳ್ಳುತ್ತಿರುವುದು ವಿಷಾಧನೀಯ ಸಂಗತಿಯಾಗಿದೆ. ಇಂತಹ ದೌರ್ಜನ್ಯ ಮತ್ತು ಶೋಷಣೆಗಳನ್ನು ತಡೆಗಟ್ಟಲು ನಾವೆಲ್ಲರೂ ಕೈ ಜೋಡಿಸಬೇಕು ಎಂದರು.

ಸಮಾಜದ ಪೀಡಗು ಆಗಿರುವ ಬಾಲ್ಯವಿವಾಹ ಪ್ರಕರಣಗಳು ಸಹ ಹೆಚ್ಚಾಗಿ ಕಂಡುಬರುತ್ತಿದ್ದು, ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಪೋಷಕರಿಗೆ ಅರಿವು ಮೂಡಿಸಬೇಕು. ಮಕ್ಕಳಿಗೆ ಸರಿಯಾದ ಶಿಕ್ಷಣ ನೀಡಿ ಮುಖ್ಯವಾಹಿನಿಗೆ ತರಬೇಕು. ಬಡತನ ಹಿನ್ನೆಲೆ ಹೊಂದಿರುವ ಕುಟುಂಬಗಳಲ್ಲಿ ಹೆಚ್ಚಿನ ಮಕ್ಕಳು ಶಾಲೆ ಬಿಟ್ಟು ಕೆಲಸಕ್ಕೆ ಹೋಗುವುದು, ಬಾಲ್ಯವಿವಾಹ ಸೇರಿದಂತೆ ಇನ್ನಿತರೆ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅಂತಹ ಪ್ರದೇಶಗಳಲ್ಲಿ ಪೋಷಕರಿಗೆ ಮಕ್ಕಳ ರಕ್ಷಣೆ ಮತ್ತು ಹಕ್ಕುಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕೆಲಸವಾಗಬೇಕಿದೆ ಎಂದು ಹೇಳಿದರು.

ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಅವರು ಮಾತನಾಡಿ, ಪ್ರತಿಯೊಬ್ಬರೂ ಮಗು ಜನಿಸಿದ ಮತ್ತು ನಂತರ ಸಂದರ್ಭದಲ್ಲಿ ಅಂಗವಿಕಲತೆ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿ ಮುನ್ನೆಚ್ಚರಿಕೆ ವಹಿಸಿದರೆ ಅಂಗವಿಕಲತೆಯನ್ನು ತಡೆಗಟ್ಟಬಹುದು. ಸಮಾಜದಲ್ಲಿ ಕಣ್ಣಿಗೆ ಕಾಣುವ ಮತ್ತು ಕಾಣಿಸದೇ ಇರುವ ವಿವಿಧ ಅಂಗವಿಕಲತೆ ಹೊಂದಿದ ಜನರು ಇದ್ದಾರೆ. ಇವುಗಳ ಬಗ್ಗೆ ಪೋಷಕರಿಗೆ ಹೆಚ್ಚಿನ ಅರಿವು ಮೂಡಿಸಿ ಜಾಗೃತಿಗೊಳಿಸಬೇಕು ಎಂದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್ ಅವರು ಮಾತನಾಡಿ, ಮಕ್ಕಳು ದೇಶದ ಭವಿಷ್ಯ, ಅವರಿಗೆ ಶಿಕ್ಷಣ, ರಕ್ಷಣೆ, ಮೂಲಭೂತ ಸೌಲಭ್ಯ ಒದಗಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ ಇನ್ನಿತರೆ ವಿಷಯಗಳು ಮಕ್ಕಳ ಮೇಲೆ ದೈಹಿಕ ಮತ್ತು ಮಾನಸಿಕವಾಗಿ ಪರಿಣಾಮ ಬೀರುತ್ತಿದ್ದು, ಮಕ್ಕಳ ರಕ್ಷಣೆ ಮಾಡುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಮಕ್ಕಳು ಹೆಚ್ಚಾಗಿ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯರಾಗಿದ್ದು, ಹದಿಹರಿಯದವರು ಪ್ರೀತಿ-ಪ್ರೇಮದ ಬಲೆಗೆ ಬೀಳುತ್ತಿದ್ದಾರೆ. ಹಾಗಾಗಿ ಪೋಷಕರು ಮಕ್ಕಳ ಮೇಲೆ ಹೆಚ್ಚಿನ ಗಮನ ವಹಿಸಬೇಕು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಸುಭದ್ರಾದೇವಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳನ್ನು ಅನೈತಿಕ ಚಟುವಟಿಕೆಗಳಲ್ಲಿ ಬಳಸಿಕೊಳ್ಳುವುದು ಅಪರಾಧವಾಗಿದೆ. ಮಕ್ಕಳ ರಕ್ಷಣೆ ಬಗ್ಗೆ ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಭೆ ನಡೆಸಿ ಮಕ್ಕಳ ಸ್ಥಿತಿ-ಗತಿಗಳು, ಸಮಸ್ಯೆಗಳ ಬಗ್ಗೆ ವರದಿ ಮಾಡಿ ಮೇಲಾಧಿಕಾರಿಗಳಿಗೆ ತಿಳಿಸಬೇಕು ಹಾಗೂ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಮಕ್ಕಳ ಗ್ರಾಮ ಸಭೆ ನಡೆಸಿ ಮಕ್ಕಳಿಗೆ ಅವರ ಹಕ್ಕುಗಳು, ಮೂಲಭೂತ ಸೌಲಭ್ಯಗಳ ಬಗ್ಗೆ ತಿಳಿಸಬೇಕು ಎಂದರು.

ಮಕ್ಕಳ ವಿಶೇಷ ಪೊಲೀಸ್ ಘಟಕದ ರೆಷ್ಮಾ ಅವರು ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಕ್ರೈಂ ಬಗ್ಗೆ ವಿವರವಾಗಿ ತಿಳಿಸಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ಡಾ.ಹೆಚ್.ಸಿ ರಾಘವೇಂದ್ರ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ, ಮಕ್ಕಳ ರಕ್ಷಣೆ ವಿಷಯದ ಕುರಿತು ಸವಿವರವಾಗಿ ತಿಳಿಸಿಕೊಟ್ಟರು. ಇದೇ ವೇಳೆ ನ್ಯಾ.ರಾಜೇಶ್ ಎನ್.ಹೊಸಮನೆ ಅವರು ರಸ್ತೆ ಸುರಕ್ಷತಾ ಸಪ್ತಾಹದ ಬಗ್ಗೆ ವಿವರಿಸಿ, ಭಿತ್ತಿಪತ್ರಗಳನ್ನು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಎಫ್.ಗೌಸಿಯಾ, ಚಟ್ಲ ವೆಂಕಟೇಶ್, ಜಿಲ್ಲಾ ನಿರೂಪಣಾಧಿಕಾರಿ ಸವಿತಾ, ಸಿಬ್ಬಂದಿಗಳಾದ ಚನ್ನಬಸಪ್ಪ, ಮಂಜುನಾಥ, ಈಶ್ವರ್ ರಾವ್, ಹೊನ್ನುರಪ್ಪ ಸೇರಿದಂತೆ ವಿವಿಧ ಕಾರ್ಯಕರ್ತರು ಇತರರು ಉಪಸ್ಥಿತರಿದ್ದರು.

ಹುಣ್ಣಿಮೆಯ ಪ್ರಯುಕ್ತ ಮಹಿಳೆಯರಿಂದ ಪಲ್ಲಕ್ಕಿ ಉತ್ಸವ





ರಾಯಚೂರು,ಜ.04-

ನಗರದ ಜ್ಯೋತಿ ಕಾಲೋನಿ ಅಲ್ಲಮಪ್ರಭು ಲೇಔಟ್ ನಲ್ಲಿರುವ ಹುತ್ತಿನ ಉದ್ಭವ ಸೌದತ್ತಿ ಯಲ್ಲಮ್ಮ ತಾಯಿಯ ದೇವಸ್ಥಾನದಲ್ಲಿ ದೇವಸ್ಥಾನದ ಸಂಸ್ಥಾಪಕ ಅಧ್ಯಕ್ಷರಾದ ರಾಜೇಶ್ವರಿ ವೆಂಕಟೇಶ ನಾಯಕರವರ ನೇತೃತ್ವದಲ್ಲಿ ಯಲ್ಲಮ್ಮ ತಾಯಿಗೆ4ನೇ ತಿಂಗಳ ಕುಂಕುಮಾರ್ಚನೆ ಮತ್ತು ಮಹಿಳೆಯರಿಂದ ಪಲ್ಲಕ್ಕಿ ಉತ್ಸವವನ್ನು ಹಮ್ಮಿಕೊಳ್ಳಲಾಗಿತ್ತು.

ದೇವಸ್ಥಾನದ ಪ್ರಧಾನ ಅರ್ಚಕರಾದ ವೇ.ಮೂ. ರಾಜಶೇಖರ ಶಾಸ್ತ್ರಿ ಸೂಗರಾಳ, ಕಲ್ಮಲಾ ಇವರ ಪುರೋಹಿತ್ಯದಲ್ಲಿ ಕುಂಕುಮಾರ್ಚನೆ ಪೂಜಾ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು,

ನಂತರ ನೂರಾರು ಮಹಿಳೆಯರು ಮತ್ತು ಚಿಕ್ಕ ಚಿಕ್ಕ ಮಕ್ಕಳು ಜಗನ್ಮಾತೆಗೆ ಕುಂಕುಮಾರ್ಚನೆ ಸಲ್ಲಿಸಿದರು.

ನಂತರ ಶಾಸ್ತ್ರಿಗಳು ಯಲ್ಲಮ್ಮ ತಾಯಿಯ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿದರು, ರಾಜೇಶ್ವರಿ ಅಮ್ಮನವರ ಕಳಸದೊಂದಿಗೆ ವಿಶೇಷವಾಗಿ ಮಹಿಳೆಯರಿಂದ ದೇವಸ್ಥಾನದ ಸುತ್ತ ಐದು ಸುತ್ತುಗಳ ಪಲ್ಲಕ್ಕಿ ಸೇವೆಯು ಅದ್ದೂರಿಯಾಗಿ ಜರಯಗಿತು.

ಅಮ್ಮನವರಿಂದ ಮಾತೆಗೆ ಮಹಾ ಮಂಗಳಾರುತಿ ನೆರವೇರಿತು.

ನಂತರ ಮಾತನಾಡಿದ ರಾಜೇಶ್ವರಿ ಅಮ್ಮನವರು ತಾಯಿಗೆ ಕುಂಕುಮಾರ್ಚನೆ ಮತ್ತು ಪಲ್ಲಕ್ಕಿ ಸೇವೆ ಸಲ್ಲಿಸಿದ ತಮಗೆ ಆ ಸೌದತ್ತಿ ಮಾತೆಯ ಆಶೀರ್ವಾದ ಸದಾ ನಿಮಗಿರಲಿ, ಕುಂಕುಮಾರ್ಚನೆಯಿಂದ ಮನುಷ್ಯನಲ್ಲಿರುವ ದುರ್ಗುಣಗಳು ನಶಿಸಿ ಒಳ್ಳೇ ಸನ್ಮಾರ್ಗ ಆಶೀರ್ವಾದ ತಾಯಿ ಕೃಪೆ ತಮಗೆ ಲಭಿಸಿ ನಿಮ್ಮ ಇಷ್ಟಾರ್ಥಗಳು ಸುಲಭವಾಗಿ ಫಲಿಸುತ್ತವೆ, ಜನೇವರಿ 29, 30, 31 ಮತ್ತು ಪೆಬ್ರುವರಿ 01, 02 ರಂದು ಜರುಗುವ ದೇವಸ್ಥಾನದಲ್ಲಿ ಜಾತ್ರಾ ಪ್ರಯಕ್ತವಾಗಿ ಜರುಗುತ್ತಿರಯವ ಮಂಗಳ ಕಾರ್ಯಗಳಲ್ಲಿ ತಾವೆಲ್ಲರು ಪಾಲ್ಗೊಂಡು ಹುತ್ತಿನ ಉದ್ಭವ ಸೌದತ್ತಿ ಯಲ್ಲಮ್ಮ ಕೃಪಾಶೀರ್ವಾದ ಪಡೆಯಿರಿ, ಸರ್ವರಿಗೂ ಆ ತಾಯಿ ಸನ್ಮಂಗಲವನ್ನುಂಟುಮಾಡಲಿ ಎಂದು ನುಡಿದರು.

ಇದೇ ಸಂದರ್ಭದಲ್ಲಿ ದೇವಸ್ಥಾನದ ಆವರಣದಲ್ಲಿ ಆಶ್ರಮ ಮಾಡಿದ ಶಬರಿ ಮಲೈ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳ ನಿತ್ಯದ ಮಂಗಳಾರುತಿ ಕಾರ್ಯಕ್ರಮವು ಸಂಭ್ರಮದಿಂದ ಜರುಗಿತು.

ಈ ಸಂದರ್ಭದಲ್ಲಿ ದೇವಸ್ಥಾನದ ಸೇವಾ ಸಮಿತಿಯವರು, ನೂರಾರು ಮಹಿಳೆಯರು ಮಕ್ಕಳು ಹಾಗೂ ಬಡಾವಣೆಯ ಸರ್ವ ಸದ್ಭಕ್ತರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಬಿಜೆಪಿ ಕಾಮುಕರ ವಿರುದ್ಧ ಕುಡುಗೋಲು ಹಿಡಿದ ಮಹಿಳಾ ಶಕ್ತಿ!



2022ರ ಸೆಪ್ಟೆಂಬರ್‌ನಲ್ಲಿ ಬೆಳಕಿಗೆ ಬಂದ 19 ವರ್ಷದ ಯುವತಿ ಅಂಕಿತಾ ಭಂಡಾರಿ ಅವರ ಕೊಲೆ ಪ್ರಕರಣವು ಉತ್ತರಾಖಂಡದ ಬಿಜೆಪಿ ಸರ್ಕಾರವನ್ನು ಇಂದಿಗೂ ಕಾಡುತ್ತಿದೆ. ಸರ್ಕಾರ ಮತ್ತು ಬಿಜೆಪಿ ನಾಯಕರ ವಿರುದ್ಧದ ಆಕ್ರೋಶವು ಮಹಿಳೆಯರ ಒಡಲ ಕಿಚ್ಚಿನಲ್ಲಿ ಹೊರಹೊಮ್ಮಿದೆ. ಕುಡುಗೋಲು ಹಿಡಿದು ಮಹಿಳಾ ಪ್ರತಿಭಟನಾಕಾರರು ಬಿಜೆಪಿ ನಾಯಕರಿಗೆ ಪಂಥಾಹ್ವಾನ ಕೊಟ್ಟಿದ್ದಾರೆ. ವಿಶೇಷ ಸೇವೆ ಬೇಕಾ? ಕಾಮದ ತೀಟೆ ಹತ್ತಿರುವ ಬಿಜೆಪಿ ನಾಯಕರು ಎಷ್ಟು ಮಂದಿ ಇದ್ದೀರಿ? ಎಲ್ಲರೂ ಬನ್ನಿ! ಎಂದು ಸವಾಲು ಹಾಕಿದ್ದಾರೆ. ಬಿಜೆಪಿ ಸರ್ಕಾರಕ್ಕೆ ಬಹುದೊಡ್ಡ ಎಚ್ಚರಿಕೆ ನೀಡಿದ್ದಾರೆ.

ಉತ್ತರಾಖಂಡದ ಋಷಿಕೇಶದಲ್ಲಿರುವ ಉಚ್ಚಾಟಿತ ಬಿಜೆಪಿ ನಾಯಕ ವಿನೋದ್ ಆರ್ಯ ಮತ್ತು ಅವರ ಪುತ್ರ ಪುಲ್ಕಿತ್ ಆರ್ಯ ನಡೆಯುತ್ತಿರುವ ವನಂತರಾ ರಿಸಾರ್ಟ್‌ನಲ್ಲಿ ರಿಸೆಪ್ಶನಿಸ್ಟ್ ಆಗಿ ಅಂಕಿತಾ ಭಂಡಾರಿ ಕೆಲಸ ಮಾಡುತ್ತಿದ್ದರು. ಆಕೆ 2022ರ ಆರಂಭದಲ್ಲಿ ಕಾಣೆಯಾಗಿದ್ದರು. ಕಾಣೆಯಾದ 6 ತಿಂಗಳ ಬಳಿಕ, ಆಕೆಯ ಮೃತದೇಹ ನಾಲೆಯೊಂದರಲ್ಲಿ ಪತ್ತೆಯಾಗಿತ್ತು. ಆಕೆಯನ್ನು ಪುಲ್ಕಿತ್ ಆರ್ಯ ಕೊಲೆ ಮಾಡಿದ್ದಾನೆಂಬುದು ಸಾಬೀತಾಗಿದೆ. 2025ರ ಮಾರ್ಚ್‌ನಲ್ಲಿ ಪುಲ್ಕತ್ ಆರ್ಯ ಮತ್ತು ಆತನ ತಂದೆ ವಿನೋದ್ ಆರ್ಯಗೆ ನ್ಯಾಯಾಲಯವು ಜೀವಾವಧಿ ಶಿಕ್ಷೆ ವಿಧಿಸಿದೆ.

ಆದರೂ, ಅಂಕಿತಾ ಕುಟುಂಬಕ್ಕೆ ಪರಿಪೂರ್ಣ ನ್ಯಾಯ ಸಿಕ್ಕಿಲ್ಲವೆಂಬ ಭಾವನೆ ರಾಜ್ಯದ ಜನರ ಮನದಲ್ಲಿ ಆಳವಾಗಿ ಬೇರೂರಿತ್ತು. ಕಾರಣ, ಪ್ರಕರಣದಲ್ಲಿ ಬಿಜೆಪಿ ಉನ್ನತ ನಾಯಕರೊಬ್ಬರ ಕೈವಾಡವಿದೆ ಎಂಬ ಗಂಭೀರ ಆರೋಪ. ಬಿಜೆಪಿ ಹೈಕಮಾಂಡ್ ಅನ್ನೇ ಬೊಟ್ಟು ಮಾಡುವ ಆರೋಪವು ಸಾರ್ವಜನಿಕವಾಗಿ ಕೇಳಿಬರುತ್ತಿದ್ದರೂ, ಈ ಆರೋಪವನ್ನು ತನಿಖೆಯಲ್ಲಿ ಬದಿಗಿಡಲಾಗಿತ್ತು. ಆದರೂ, ಚರ್ಚೆಗಳು ಮಾತ್ರ ನಿರಂತರವಾಗಿ ನಡೆದೇ ಇದ್ದವು. ಇದೀಗ, 2025ರ ಡಿಸೆಂಬರ್‌ನಲ್ಲಿ ನಟಿ ಊರ್ಮಿಳಾ ಸನಾವರ್ ಅವರು ಬಿಡುಗಡೆ ಮಾಡಿರುವ ಆಡಿಯೋವೊಂದು ಪ್ರಕರಣದಲ್ಲಿ ಬಹುದೊಡ್ಡ ತಿರುವು ತಂದಿದೆ. ಆಕ್ರೋಶವು ಸ್ಫೋಟಗೊಳ್ಳುವಂತೆ ಮಾಡಿದೆ.

ಆಡಿಯೋದಲ್ಲಿ ಗಟ್ಟು ಮತ್ತು ಇನ್ನೊಬ್ಬ ಬಿಜೆಪಿ ಹಿರಿಯ ನಾಯಕ ಸಂಭಾಷಣೆ ಕೇಳಿಬಂದಿದೆ. ಅದರಲ್ಲಿ, ಗಟ್ಟು ಎಂಬ ವ್ಯಕ್ತಿ ಬಿಜೆಪಿಯ ಹಿರಿಯ ನಾಯಕ, ಉತ್ತರಾಖಂಡದ ಬಿಜೆಪಿ ಉಸ್ತುವಾರಿ ದುಷ್ಯಂತ್ ಕುಮಾರ್ ಗೌತಮ್ ಅವರೇ ಆಗಿದ್ದಾರೆ. ಕೊಲೆ ಅಪರಾಧಿ ಪುಲ್ಕಿತ್ ಆರ್ಯ ಮತ್ತು ಅವರ ಸಹಚರರು ವಿಐಪಿ ಓರ್ವರಿಗೆ ವಿಶೇಷ ಸೇವೆ (ಲೈಂಗಿಕ ಸೇವೆ) ನೀಡುವಂತೆ ಒತ್ತಾಯಿಸಿದ್ದರು ಎಂಬುದು ಪ್ರಕರಣದ ಗಮನಾರ್ಹ ಸಂಗತಿಯಾಗಿತ್ತು. ಇದೀಗ, ಆ ವಿಐಪಿಯೇ ಗಟ್ಟು. ಆತ ಬೇರಾರೂ ಅಲ್ಲ, ಬಿಜೆಪಿ ಉಸ್ತುವಾರಿ ದುಷ್ಯಂತ್ ಗೌತಮ್ ಎಂದು ಊರ್ಮಿಳಾ ಆರೋಪಿಸಿದ್ದಾರೆ.

ಚಿಕ್ಕ ಹುಡುಗಿ ಅಂಕಿತಾ ಭಂಡಾರಿ ತಮ್ಮ ಉದ್ಯೋಗದಲ್ಲಿ ತೀವ್ರ ಒತ್ತಡವನ್ನು ಎದುರಿಸಿದ್ದರು. ತಮ್ಮ ದೃಢತೆ ಮತ್ತು ದೌರ್ಜನ್ಯಕ್ಕೆ ಬಗ್ಗಲು ನಿರಾಕರಿಸಿ ತಮ್ಮ ಪ್ರಾಣವನ್ನೇ ಕಳೆದುಕೊಂಡರು ಎಂದು ಆಕೆಯ ಸಹೋದ್ಯೋಗಿಗಳೂ ಹೇಳಿಕೊಂಡಿದ್ದಾರೆ. ಆ ಆಡಿಯೋ, ಸಹೋದ್ಯೋಗಿಗಳು ಬಿಚ್ಚಿಟ್ಟ ಸತ್ಯ ಹಾಗೂ ಪ್ರಕರಣವು ಉತ್ತರಾಖಂಡದಲ್ಲಿ ಮಹಿಳಾ ಸುರಕ್ಷತೆ ಕುರಿತ ಪ್ರಶ್ನೆಯನ್ನು ಹುಟ್ಟುಹಾಕಿದೆ.

ಮುಖ್ಯವೆಂದರೆ, ಉತ್ತರಾಖಂಡ ರಾಜ್ಯವು ಮಹಿಳೆಯರಿಗೆ ಸುರಕ್ಷಿತ ಎಂದು ಖ್ಯಾತಿ ಹೊಂದಿರುವ ರಾಜ್ಯ. ಆದರೆ, ಇತ್ತೀಚಿನ ಘಟನಾವಳಿಗಳು ಆ ಖ್ಯಾತಿಯನ್ನು ಪ್ರಶ್ನಿಸುವಂತೆ ಮಾಡಿವೆ. ಅಲ್ಲಿನ ರಿಸಾರ್ಟ್‌ಗಳು, ಪ್ರವಾಸೋದ್ಯಮದಲ್ಲಿ ಮಹಿಳಾ ಉದ್ಯೋಗಿಗಳ ಮೇಲೆ ಲೈಂಗಿಕ ಒತ್ತಡಗಳು ಹೆಚ್ಚುತ್ತಿವೆ. ಉತ್ತರಾಖಂಡದ ರೆಸಾರ್ಟ್‌ಗಳಲ್ಲಿ ವಿಐಪಿ ಸಂಸ್ಕೃತಿ ಬೇರೂರುತ್ತಿದೆ. ಪ್ರಭಾವಿಗಳ ಒಡೆತನದ ರೆಸಾರ್ಟ್‌ಗಳಲ್ಲಿ ತಮ್ಮ ವಿಐಪಿ ಅತಿಥಿಗಳಿಗೆ ಹೆಚ್ಚುವರಿ/ವಿಶೇಷ ಸೇವೆ ಹೆಸರಿನಲ್ಲಿ ಲೈಂಗಿಕವಾಗಿ ಸಹರಿಸುವಂತೆ ಮಹಿಳಾ ಉದ್ಯೋಗಿಗಳ ಮೇಲೆ ಒತ್ತಡ ಹೇರಲಾಗುತ್ತಿದೆ ಎಂಬ ಕರಾಳಮುಖವು ತೆರೆದಿಟ್ಟಿದೆ. ಅನೌಪಚಾರಿಕ ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರಿಗೆ ಲೈಂಗಿಕ ಬೆದರಿಕೆ, ಕಿರುಕುಳ, ದೌರ್ಜನ್ಯದ ಆರೋಪಗಳು ಅಭದ್ರತೆಯನ್ನು ಸೃಷ್ಟಿಸಿವೆ.

ಆರೋಪ, ಅಭದ್ರತೆ ಹಾಗೂ ಆತಂಕವು ಪ್ರತಿಭಟನೆಗಳನ್ನು ತೀವ್ರಗೊಳಿಸಿದೆ. ಮಹಿಳಾ ಹೋರಾಟಗಾರರು ಕುಡುಗೋಲು, ಮೇಣದ ಬತ್ತಿ ಹಿಡಿದು ಬೀದಿಗಳಿದಿದ್ದಾರೆ. ಅಂಕಿತಾ ಬಂಡಾರಿ ಕುಟುಂಬಕ್ಕೆ ಸಂಪೂರ್ಣ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದ್ದಾರೆ. ನಿಷ್ಪಕ್ಷಪಾತ ತನಿಖೆಗಾಗಿ ಪ್ರಕರಣವನ್ನು ಸಿಬಿಐ ತನಿಖೆಗೆ ವರ್ಗಾಯಿಸುವುದಂತೆ ಒತ್ತಾಯಿಸಿದ್ದಾರೆ. ಮಹಿಳೆಯರ ಈ ಪ್ರತಿಭಟನೆಗಳು ಕೇವಲ ಒಂದು ಪ್ರಕರಣಕ್ಕೆ ಸೀಮಿತವಲ್ಲ. ಇದು ಅಧಿಕಾರದ ದುರ್ಬಳಕೆ, ಮಹಿಳಾ ಸುರಕ್ಷತೆ ಹಾಗೂ ರಾಜಕೀಯ ಒಳಒಪ್ಪಂದ ಮತ್ತು ರಕ್ಷಣೆಯ ವಿರುದ್ಧದ ಕಿಡಿಯಾಗಿದೆ.

ಮಹಿಳಾ ಶಕ್ತಿಯ ಪ್ರತಿಭಟನೆಗೆ ಕಾಂಗ್ರೆಸ್, ಎಡಪಕ್ಷಗಳು ಜೊತೆಗೂಡಿವೆ. ಬೃಹತ್ ಪ್ರತಿಭಟನೆಗಳನ್ನು ರೂಪಿಸುತ್ತಿವೆ. ಜನವರಿ 4ರಂದು ಮುಖ್ಯಮಂತ್ರಿ ಕಚೇರಿಗೆ ಘೇರಾವ್ ಹಾಕಲು ನಿರ್ಧಿಸಿದ್ದಾರೆ. ಮಾತ್ರವಲ್ಲ, ಬಿಜೆಪಿ ಮಾಜಿ ಸಚಿವ ವಿಜಯ್ ಬರ್ತ್ವಾಲ್, ಮಾಜಿ ಮುಖ್ಯಮಂತ್ರಿ ಹಾಲಿ ಸಂಸದ ತ್ರಿವೇಂದ್ರ ಸಿಂಗ್ ರಾವತ್, ಬಿಜೆಪಿ ನಾಯಕ ಅಜೇಂದ್ರ ಅಜಯ್ ಸೇರಿದಂತೆ ಕೆಲವು ಬಿಜೆಪಿ ನಾಯಕರೂ ಸಿಬಿಐ ತನಿಖೆಗಾಗಿನ ಒತ್ತಾಯವನ್ನು ಬೆಂಬಲಿಸಿದ್ದಾರೆ. ಆರೋಪ ಹೊತ್ತಿರುವ ದುಷ್ಯಂತ್ ಗೌತಮ್ ನೈತಿಕ ಜವಾಬ್ದಾರಿಯಿಂದ ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ. ಇದೇ ಆಗ್ರಹದೊಂದಿಗೆ ಹಲವರು ಪಕ್ಷಕ್ಕೆ ರಾಜೀನಾಮೆಯನ್ನೂ ನೀಡಿದ್ದಾರೆ. ಸಿಬಿಐ ತನಿಖೆಗಾಗಿ ಇಡೀ ರಾಜ್ಯವೇ ಒತ್ತಾಯಿಸುತ್ತಿದೆ. ಆದರೆ, ಸರ್ಕಾರವು ಆರೋಪಗಳಿಗೆ ಸಾಕ್ಷ್ಯ ಕೊಡಿ ಎಂದು ಪ್ರತಿಭಟನಾಕಾರರನ್ನೇ ಕೇಳುತ್ತಿದೆ. ಇದು, ಬಿಜೆಪಿಯ ವಿಐಪಿ ಬಚಾವೋ ಎಂಬ ಹಿಡನ್ ನೀತಿಯನ್ನು ಎತ್ತಿ ತೋರುತ್ತಿದೆ.

ಈಗಾಗಲೇ, ಅತ್ಯಾಚಾರ ಆರೋಪಿ ಕುಲದೀಪ್ ಸಿಂಗ್ ಸೆಂಗರ್, ಲೈಂಗಿಕ ಕಿರುಕುಳದ ಆರೋಪಿ ಬ್ರಿಜ್ ಭೂಷಣ್ ಸಿಂಗ್, ಬಿ.ಎಸ್ ಯಡಿಯೂರಪ್ಪ, ಸ್ವಾಮಿ ಚಿನ್ಮಯಾನಂದ ಸೇರಿದಂತೆ ಹಲವು ಆರೋಪಿಗಳ ಪರವಾಗಿ ಬಿಜೆಪಿ ಮತ್ತು ಸರ್ಕಾರಗಳು ನಿಲುವು ತೆಗೆದುಕೊಂಡು ಜನರ ಕೆಂಗಣ್ಣಿಗೆ ಗುರಿಯಾಗಿವೆ. ಈಗ, ಅಂಕಿತಾ ಭಂಡಾರಿ ಪ್ರಕರಣದಲ್ಲಿ ಬಿಜೆಪಿ ಸರ್ಕಾರವು ಆರೋಪಿಯೆಂದು ಹೇಳಲಾಗುತ್ತಿರುವ ದುಷ್ಯಂತ್ ಗೌರಮ್ ರಕ್ಷಣೆಗೆ ನಿಂತಿದೆ. ಇದು, ಜನಾಕ್ರೋಶ ಸಿಡಿದೇಳುವಂತೆ ಮಾಡುತ್ತಿದೆ.

ಉತ್ತರಾಖಂಡದ ಬಿಜೆಪಿ ಸರ್ಕಾರವು ತಮ್ಮ ರಾಜ್ಯದ ಪ್ರವಾಸೋದ್ಯಮದಲ್ಲಿರುವ ವಿಐಪಿ ಸಂಸ್ಕೃತಿ ಮತ್ತು ಹೆಚ್ಚುವರಿ ಸೇವೆ ಎಂಬ ಲೈಂಗಿಕ ದೌರ್ಜನ್ಯದ ತಡೆಗೆ ಕಠಿಣ ಕ್ರಮಗಳನ್ನು ಕೈಗೊಳ್ಳದಿದ್ದರೆ, ಅಂಕಿತಾ ಭಂಡಾರಿ ಪ್ರಕರಣದ ಹಿಂದಿರುವ ವಿಐಪಿ ನಾಯಕನ ವಿರುದ್ಧ ತನಿಖೆಗೆ ಮುಂದಾಗದಿದ್ದರೆ, ಬಿಜೆಪಿ ಸರ್ಕಾರಕ್ಕೆ ಉಳಿಗಾಲವಿಲ್ಲ ಎಂಬುದನ್ನು ಮಹಿಳೆಯರ ಕಿಚ್ಚು ಒತ್ತಿ ಹೇಳುತ್ತಿದೆ.



ಸಿರುಗುಪ್ಪ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ ಶಾಲಾ ಸೌಲಭ್ಯಕ್ಕೆ ಮನವಿ ಪತ್ರ

ಸಿರುಗುಪ್ಪ,ಜ.04-

ತಾಲೂಕು ಬೈರಾಪುರ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಜರುಗಿದ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆಯಲ್ಲಿ ಶಾಲಾ ಸೌಲಭ್ಯಕ್ಕಾಗಿ ಬಳ್ಳಾರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೊಹಮ್ಮದ್ ಹ್ಯಾರಿಸ್ ಸುಮೇರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು

ಬಳ್ಳಾರಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತಾರ್ ಬೋಧನೆ ಸಿದ್ದಪ್ಪ ಗ್ರಾಮ ಪಂಚಾಯತ್ ಅಧ್ಯಕ್ಷೆ ಲಕ್ಷ್ಮಿ ದೊಡ್ಡಬಸಪ್ಪ ಉಪಾಧ್ಯಕ್ಷ ಗೋವಿಂದಪ್ಪ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್ ಗುರಪ್ಪ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆ ಅಧಿಕಾರಿ ಜಿ ಪ್ರದೀಪ್ ಕುಮಾರ್ ಜಿಲ್ಲಾ ಸಾಕ್ಷರತಾ ಕಾರ್ಯಕಾರಿ ಸದಸ್ಯ ಅಬ್ದುಲ್ ನಬಿ ಸಮನ್ವಯಾಧಿಕಾರಿ ತಮ್ಮನ ಗೌಡ ಪಾಟೀಲ್ ಜಿಲ್ಲಾ ಕಾರ್ಮಿಕ ಅಧಿಕಾರಿ ಮೌನೇಶ್ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಗೌಸಿಯಾ ಚಟ್ಲ ವೆಂಕಟೇಶ್ ಮುಖ್ಯ ಗುರುಗಳಾದ ರಾಮ್ ಮೋಹನ್ ಬಾಬು ಮತ್ತಿತರರು ಇದ್ದರು

ನಮ್ಮ ಕ್ಲಿನಿಕ್ ರಿಯಾಲಿಟಿ ಚೆಕ್ ಬಡವರಿಗಾಗಿ ಆರೋಗ್ಯ ಸೇವೆ ಎಂದಿದ್ದ ಯೋಜನೆ; ಬಾಗಿಲೇ ತೆರೆಯದ ಕ್ಲಿನಿಕ್‌ಗಳು!

ನಮ್ಮ ಕ್ಲಿನಿಕ್‌ಗಳ ಸ್ಥಿತಿ ಮತ್ತು ಕಾರ್ಯಕ್ಷಮತೆ ಹೇಗಿದೆ ಎನ್ನುವುದು ನಡೆಸಿದ ರಿಯಾಲಿಟಿ ಚೆಕ್‌ನಲ್ಲಿ ಬಹಿರಂಗವಾಗಿದೆ. ನಗರದ ಜನರಿಗೆ ಪ್ರಾಥಮಿಕ ಆರೋಗ್ಯ ಸೇವೆ ಒದಗಿಸಲೆಂದೇ ಆರಂಭಿಸಲಾದ ಈ ನಮ್ಮ ಕ್ಲಿನಿಕ್ ಯೋಜನೆಯು ಬೆಂಗಳೂರಿನ ಮಹಾಕವಿ ಕುವೆಂಪು ರಸ್ತೆ ಹಾಗೂ ಶ್ರೀರಾಂಪುರ ಪ್ರದೇಶಗಳಲ್ಲಿ ಆತಂಕಕಾರಿ ಸ್ಥಿತಿಗೆ ತಲುಪಿದೆ. ಹೆಸರಿಗಷ್ಟೇ ಇವು ನಮ್ಮ ಕ್ಲಿನಿಕ್‌ಗಳು, ಆದರೆ ನಮಗೆ ಸಿಗಬೇಕಾದ ವೈದ್ಯಕೀಯ ಸೇವೆಯ ಸುಳಿವೇ ಇಲ್ಲಿಲ್ಲ.

ನಗರ ಪ್ರದೇಶದ ವಲಸೆ ಕಾರ್ಮಿಕರು, ಬಡವರು ಹಾಗೂ ಅಂಚಿನಲ್ಲಿರುವ ಜನರಿಗೆ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಬಿಜೆಪಿ ಸರ್ಕಾರ 2022ರಲ್ಲಿ ನಮ್ಮ ಕ್ಲಿನಿಕ್ ಯೋಜನೆಯನ್ನು ಜಾರಿಗೆ ತಂದಿತ್ತು. ಪ್ರಾಥಮಿಕ ಆರೋಗ್ಯ ಸೇವೆಗಳನ್ನು ನಗರ ಪ್ರದೇಶಗಳಲ್ಲಿ ಸುಲಭವಾಗಿ ಲಭ್ಯವಾಗುವಂತೆ ಮಾಡುವುದು ಈ ಯೋಜನೆಯ ಮೂಲ ಉದ್ದೇಶವಾಗಿತ್ತು. ಆದರೆ ಯೋಜನೆ ಆರಂಭವಾಗಿ ಕೆಲವೇ ವರ್ಷಗಳಲ್ಲಿ, ನಮ್ಮ ಕ್ಲಿನಿಕ್‌ಗಳ ಸ್ಥಿತಿ ಮತ್ತು ಕಾರ್ಯಕ್ಷಮತೆ ಹೇಗಿದೆ ಎನ್ನುವುದುಈದಿನ ನಡೆಸಿದ ರಿಯಾಲಿಟಿ ಚೆಕ್‌ನಲ್ಲಿ ಬಹಿರಂಗವಾಗಿದೆ.

ರಾಜಧಾನಿ ಬೆಂಗಳೂರು ವ್ಯಾಪ್ತಿಯಲ್ಲಿ 2022ರಲ್ಲಿ 100 ಕ್ಲಿನಿಕ್‌ಗಳು ಆರಂಭಗೊಂಡಿದ್ದವು. 2023ರ ಫೆಬ್ರವರಿಯಲ್ಲಿ ಏಕ ಕಾಲಕ್ಕೆ 108 ನಮ್ಮ ಕ್ಲಿನಿಕ್‌ಗಳು ಕಾರ್ಯಾರಂಭ ಮಾಡಿದ್ದವು. ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಅಧಿಕೃತವಾಗಿ ಕ್ಲಿನಿಕ್‌ಗಳಿಗೆ ಚಾಲನೆ ನೀಡಿದ್ದರು. ಸದ್ಯ ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 243 ಕ್ಲಿನಿಕ್‌ಗಳು ಕಾರ್ಯ ನಿರ್ವಹಿಸುತ್ತಿವೆ. ನಮ್ಮ ಕ್ಲಿನಿಕ್‌ಗಳಲ್ಲಿ ತಲಾ ಒಬ್ಬರು ವೈದ್ಯಾಧಿಕಾರಿ, ಶುಶ್ರೂಷಕರು, ಪ್ರಯೋಗಶಾಲಾ ತಂತ್ರಜ್ಞರು, ಡಿ-ದರ್ಜೆ ನೌಕರರು ಸೇರಿ ಒಟ್ಟು 4 ಮಂದಿ ಸಿಬ್ಬಂದಿ ಇರಬೇಕಾಗಿರುವುದು ನಿಯಮ.

ನಗರದ ಜನರಿಗೆ ಪ್ರಾಥಮಿಕ ಆರೋಗ್ಯ ಸೇವೆ ಒದಗಿಸಲೆಂದೇ ಆರಂಭಿಸಲಾದ ಈ ನಮ್ಮ ಕ್ಲಿನಿಕ್ ಯೋಜನೆಯು ಬೆಂಗಳೂರಿನ ಮಹಾಕವಿ ಕುವೆಂಪು ರಸ್ತೆ ಹಾಗೂ ಶ್ರೀರಾಂಪುರ ಪ್ರದೇಶಗಳಲ್ಲಿ ಆತಂಕಕಾರಿ ಸ್ಥಿತಿಗೆ ತಲುಪಿದೆ. ಹೆಸರಿಗಷ್ಟೇ ಇವು ನಮ್ಮ ಕ್ಲಿನಿಕ್‌ಗಳು, ಆದರೆ ನಮಗೆ ಸಿಗಬೇಕಾದ ವೈದ್ಯಕೀಯ ಸೇವೆಯ ಸುಳಿವೇ ಇಲ್ಲಿಲ್ಲ. ಮುಖ್ಯ ರಸ್ತೆಗೆ ಹೊಂದಿಕೊಂಡಂತಿರುವ ಕೆಲವು ಕ್ಲಿನಿಕ್‌ಗಳನ್ನು ಹೊರತುಪಡಿಸಿ, ಹಲವು ಕ್ಲಿನಿಕ್‌ಗಳು ನಗರದ ಒಳ ಭಾಗದಲ್ಲಿವೆ. ಇದರಿಂದ ಇಂಥದ್ದೊಂದು ಕ್ಲಿನಿಕ್ ಇದೆ ಎನ್ನುವುದೇ ಹಲವು ಸ್ಥಳೀಯರಿಗೆ ತಿಳಿದಿಲ್ಲ. ತಿಳಿದ ಒಬ್ಬಿಬ್ಬರು ಮಾತ್ರ ಆಸ್ಪತ್ರೆ ಕಡೆ ಮುಖ ಮಾಡಬಹುದು. ಅವರಿಗೂ ಸರಿಯಾದ ಸಮಯಕ್ಕೆ ಚಿಕಿತ್ಸೆ, ಅಗತ್ಯ ಔಷಧಿ ಸಿಗುವ ಖಚಿತತೆ ಇಲ್ಲ. ಖುದ್ದು ವೈದ್ಯರು, ವೈದ್ಯಾಧಿಕಾರಿಯನ್ನು ಸಂಪರ್ಕಿಸಿದರೆ, ಕನಿಷ್ಠ ಒಳ್ಳೆಯ ಸ್ಪಂದನೆಯೂ ಇಲ್ಲ.

ಮಹಾಕವಿ ಕುವೆಂಪು ರಸ್ತೆಯಲ್ಲಿರುವ ನಮ್ಮ ಕ್ಲಿನಿಕ್‌ಗೆ ಭೇಟಿ ನೀಡಿದಾಗ, ಅಲ್ಲಿ ವೈದ್ಯರೂ ಇಲ್ಲ, ವೈದ್ಯಾಧಿಕಾರಿಯೂ ಇಲ್ಲ. ಮಾಹಿತಿ ಕೇಳಿದಾಗಲೂ, ಕ್ಲಿನಿಕ್‌ನಲ್ಲಿ ಯಾರೂ ಲಭ್ಯವಿಲ್ಲ ಎನ್ನುವುದೇ ಸಿಬ್ಬಂದಿಯ ಉತ್ತರ. ಫೋಟೋ ಕ್ಲಿಕ್ಕಿಸಲೂ ಸಹ ಅವಕಾಶ ನೀಡದಂತ ಪರಿಸ್ಥಿತಿ. ಸಾರ್ವಜನಿಕ ಆಸ್ಪತ್ರೆಯೋ



ಅಥವಾ ಖಾಸಗಿ ಕ್ಲಿನಿಕ್ಕೋ? ಅವರೇ ಹೇಳಬೇಕು. ವೈದ್ಯಾಧಿಕಾರಿಗಳಿಗೆ ಹಾಗೂ ವೈದ್ಯರಿಗೆ ಸಭೆಗಳ ಮೇಲೆ ಸಭೆಗಳು. ಈ ರೀತಿ ನಮ್ಮ ಕ್ಲಿನಿಕ್‌ಗಳು ನಿಯಮಿತವಾಗಿ ಕಾರ್ಯನಿರ್ವಹಿಸದೇ ಇರುವುದರಿಂದ ತುರ್ತು ಚಿಕಿತ್ಸೆ ಗೆ ಬರುವ ರೋಗಿಗಳು ಹಾಗೂ ವಯೋವೃದ್ಧರು ಗಂಭೀರ ಅಪಾಯವನ್ನು ಎದುರಿಸಬೇಕಾಗಬಹುದು. ಸಮಯಕ್ಕೆ ಚಿಕಿತ್ಸೆ ಸಿಗದೇ ಹೋದರೆ ಜೀವಾಪಾಯ ಸಂಭವಿಸುವ ಸಾಧ್ಯತೆಯೂ ಇದೆ. ಇಂತಹ ಸಂದರ್ಭದಲ್ಲಿ ಉಂಟಾಗುವ ಅನಾಹುತಗಳಿಗೆ ಯಾರು ಹೊಣೆ?

ಇನ್ನು ಶ್ರೀರಾಂಪುರದಲ್ಲಿರುವ ನಮ್ಮ ಕ್ಲಿನಿಕ್‌ನ ಸ್ಥಿತಿ ಇನ್ನೂ ಶೋಚನೀಯವಾಗಿದೆ. ಅಲ್ಲಿನ ಕ್ಲಿನಿಕ್‌ನ ಕಾರ್ಯನಿರ್ವಹಣೆಯ ಯಾವುದೇ ಲಕ್ಷಣಗಳು ಕಾಣಲಿಲ್ಲ. ಇತರ ಎಲ್ಲಾ ನಮ್ಮ ಕ್ಲಿನಿಕ್‌ಗಳಲ್ಲಿ ಬೆಳಿಗ್ಗೆ 9ರಿಂದ ಸಂಜೆ 4.30ರವರೆಗೆ ಕೆಲಸದ ಅವಧಿ ನಿಗದಿಯಾಗಿದ್ದರೆ, ಶ್ರೀರಾಂಪುರ ಕ್ಲಿನಿಕ್‌ನಲ್ಲಿ ಮಾತ್ರ ವಿಭಿನ್ನ ಸಮಯ ನಿಗದಿಪಡಿಸಲಾಗಿದೆ. ಇಲ್ಲಿ ಬೆಳಿಗ್ಗೆ 6.45ರಿಂದ 10.15ರವರೆಗೆ ಹಾಗೂ ಸಂಜೆ 4ರಿಂದ 7.30ರವರೆಗೆ ಮಾತ್ರ ಕೆಲಸದ ಅವಧಿ ಎಂದು ತಿಳಿಸಲಾಗಿದೆ. ಆದರೆ ಆ ಸಮಯದಲ್ಲಿಯೂ ಕ್ಲಿನಿಕ್ ತೆರೆದಿರುವುದಕ್ಕೆ ಯಾವುದೇ ಖಾತರಿ ಇಲ್ಲ ಎಂಬುದು ಸ್ಥಳೀಯರ ಆರೋಪ.

ಸರ್ಕಾರದ ಮಹತ್ವಾಕಾಂಕ್ಷಿ ಆರೋಗ್ಯ ಯೋಜನೆಯಾದ ನಮ್ಮ ಕ್ಲಿನಿಕ್‌ಗಳು ಈ ರೀತಿ ಕಾರ್ಯನಿರ್ವಹಿಸದೇ ಇರುವುದರಿಂದ, ಬಡ ಮತ್ತು ಮಧ್ಯಮ ವರ್ಗದ ಜನರಿಗೆ ತೀವ್ರ ತೊಂದರೆಯಾಗುತ್ತಿದೆ. ಉಚಿತ ಹಾಗೂ ಸುಲಭವಾಗಿ ಲಭ್ಯವಾಗಬೇಕಾದ ಆರೋಗ್ಯ ಸೇವೆ, ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಮೇಲ್ವಿಚಾರಣೆಯ ಕೊರತೆಯಿಂದ ಜನರಿಗೆ ಸಿಗುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಸಾರ್ವಜನಿಕ ಹಣದಿಂದಲೇ ನಡೆಯುವ ಈ ಕ್ಲಿನಿಕ್‌ಗಳು ನಿಜಕ್ಕೂ ಜನರಿಗಾಗಿ ಕೆಲಸ ಮಾಡುತ್ತಿವೆಯೇ? ಇಲ್ಲವೇ ಕೇವಲ ಔಪಚಾರಿಕತೆಗೆ ರೂಪಿಸಿದ ಯೋಜನೆಯಾಗಿದೆಯೇ? ಎಂಬ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೊಳಪಟ್ಟಿವೆ. ಸಂಬಂಧಿಸಿದ ಆರೋಗ್ಯ ಇಲಾಖೆ ಅಧಿಕಾರಿಗಳು ಕೂಡಲೇ ಈ ಕ್ಲಿನಿಕ್‌ಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿ, ಜನರಿಗೆ ಅಗತ್ಯವಾದ ಆರೋಗ್ಯ ಸೇವೆ ಒದಗಿಸಬೇಕೆಂಬುದು ಸಾರ್ವಜನಿಕರ ಒತ್ತಾಯ.

''ಐದಾರು ವರ್ಷಗಳಿಂದ ಪ್ರತಿ ದಿನ ಇಲ್ಲೇ ಓಡಾಡುತ್ತಿದ್ದರೂ ಇಲ್ಲಿ ನಮ್ಮ ಕ್ಲಿನಿಕ್ ಇರುವುದೇ ಗೊತ್ತಿರಲಿಲ್ಲ. ಇತ್ತೀಚೆಗಷ್ಟೇ ತಿಳಿಯಿತು. ಚಳಿಗಾಲವಾದ್ದರಿಂದ ಶೀತವಾಗಿತ್ತು. ಮೊನ್ನೆ ಕ್ಲಿನಿಕ್‌ಗೆ ಬಂದಿದ್ದೆ. ಆದರೆ ಡಾಕ್ಟರ್ ಇರಲಿಲ್ಲ. ಕೆಲ ಮಾತ್ರೆಗಳಾದರೂ ಸಿಗಬಹುದೆಂದು ಕೇಳಿ, ಪಡೆದುಕೊಂಡು ಹೋದೆ. ಶೀತ ಕಡಿಮೆಯಾಗದ್ದಕ್ಕೆ ಮತ್ತೆ ಇಂದು ಬಂದೆ, ನೋಡಿದರೆ ಇಂದೂ ವೈದ್ಯರಿಲ್ಲ. ಯೋಜನೆ ಮಾಡಿರುವ ಉದ್ದೇಶ ಒಳ್ಳೆಯದೇ ಆಗಿದೆ. ಆದರೆ ಸರಿಯಾಗಿ ಅನುಷ್ಠಾನವಾಗುತ್ತಿಲ್ಲ ಎನ್ನುವುದು ನನ್ನ ಅಭಿಪ್ರಾಯ. ನಾವಾದರೆ ಅಷ್ಟೋ ಇಷ್ಟೋ ಓದಿಕೊಂಡಿದ್ದೇವೆ, ಒಂದಿಲ್ಲೊಂದು ಕಡೆ ಚಿಕಿತ್ಸೆ ಪಡೆದುಕೊಳ್ಳಬಲ್ಲೆವು. ಆದರೆ, ಅನಕ್ಷರಸ್ಥರೋ, ವಯೋವೃದ್ಧರೋ, ದೀರ್ಘ ಕಾಲೀನ ರೋಗಿಗಳೋ ಬಂದರೆ, ಅಂತವರೇನು ಮಾಡಿಯಾರು? ಪಕ್ಷ ಯಾವುದಾದರೇನು, ಜನಪರ ಯೋಜನೆಗಳನ್ನು ರೂಪಿಸುವುದು ಮುಖ್ಯ. ಅದರ ಜತೆಗೆ ಅವು ಯಾರಿಗಾಗಿ ರೂಪುಗೊಂಡಿವೆಯೋ ಅವರಿಗೆ ತಲುಪುವಂತೆ ಮಾಡುವುದೂ ಕೂಡ ಮುಖ್ಯ. ಒಳ್ಳೆಯ ಯೋಜನೆಗಳು ಬಂದಾಗ ಸ್ವೀಕರಿಸುತ್ತೇವೆ, ಯೋಜನೆಗಳು ಕುಂಟುತ್ತಿದ್ದರೆ ಟೀಕಿಸುತ್ತೇವೆ. ನಾವು ಸಾರ್ವಜನಿಕರು, ಸಾರ್ವಜನಿಕರಿಂದಲೇ ಸರ್ಕಾರ, ಸರ್ಕಾರವೆಂದರೆ ಜನರೇ. ಹಾಗಾಗಿ ಪ್ರಶ್ನಿಸುವ, ಟೀಕಿಸುವ, ಬೇಡಿಕೆ ಇಡುವ ಎಲ್ಲಾ ಹಕ್ಕು-ಬಾಧ್ಯತೆಗಳು ನಮಗಿವೆ. ನಮ್ಮ ಕ್ಲಿನಿಕ್ ಒಳ್ಳೆಯ ಯೋಜನೆ. ಅದನ್ನು ಸರಿಯಾಗಿ ಕಾರ್ಯಗತಗೊಳಿಸಬೇಕಷ್ಟೇ'' ಎಂದರು ಸ್ಥಳೀಯ ನಿವೃತ್ತ ಶಿಕ್ಷಕ ಸದಾಶಿವ ಆರಾಧ್ಯ.

ಕ್ಲಿನಿಕ್‌ಗಳಲ್ಲಿ ಸಿಗುವ ಆರೋಗ್ಯ ಸೇವೆಗಳೆಂತು?

1.ತಾಯಿ ಆರೋಗ್ಯ: ಗರ್ಭಿಣಿ ಹಾಗೂ ಬಾಣಂತಿ ಸೇವೆ
2.ನವಜಾತ ಶಿಶು ಆರೈಕೆ ಹಾಗೂ ಚುಚ್ಚುಮದ್ದು ಸೇವೆ
3.ಮಕ್ಕಳ ಹಾಗೂ ಹದಿಹರೆಯದವರ ಆರೋಗ್ಯ ಸೇವೆ
4.ಕುಟುಂಬ ಕಲ್ಯಾಣ ಯೋಜನೆಗಳ ಸಮಗ್ರ ಅನುಷ್ಠಾನ
5.ಎಲ್ಲಾ ರಾಷ್ಟ್ರೀಯ ಕಾರ್ಯಕ್ರಮಗಳ ಅನುಷ್ಠಾನ
6.ಸಾಂಕ್ರಾಮಿಕ ಹಾಗೂ ಅಸಾಂಕ್ರಾಮಿಕ ರೋಗಗಳ ನಿರ್ವಹಣೆ
7.ಹಿರಿಯ ನಾಗರಿಕರ ಆರೋಗ್ಯ ಸೇವೆಗಳ ಅನುಷ್ಠಾನ
8.ಮಾನಸಿಕ ಆರೋಗ್ಯ ಸೇವೆಗಳ ಅನುಷ್ಠಾನ

ಸುಟ್ಟ ಗಾಯಗಳು, ಅಪಘಾತ ಇತರೆ ಗಾಯಗಳು ಸೇರಿದಂತೆ ತುರ್ತು ಚಿಕಿತ್ಸೆ ಹಾಗೂ ಅಗತ್ಯವಿದ್ದರೆ ಹೆಚ್ಚುವರಿ ಚಿಕಿತ್ಸೆ ಗೆ ವಿಶೇಷ ಆಸ್ಪತ್ರೆಗಳಿಗೆ ಉಚಿತ ರೆಫರಲ್ ಸೇವೆಗಳು ಲಭ್ಯ ಎನ್ನುವುದು ಯೋಜನೆಯ ಮುಖ್ಯಾಂಶ ಹಾಗೂ ಉದ್ದೇಶ. ಆದರೆ ಈ ಸೇವೆಗಳು ತಲುಪುವವರಿಗೆ ತಲುಪುತ್ತಿಲ್ಲ ಎನ್ನುವುದು ಸ್ಥಳೀಯರ ಆರೋಪ.

ನಮ್ಮ ಕ್ಲಿನಿಕ್ ಯೋಜನೆ ನಗರ ಪ್ರದೇಶದ ಬಡ ಮತ್ತು ಅಂಚಿನಲ್ಲಿರುವ ಜನರಿಗೆ ಆರೋಗ್ಯ ಭರವಸೆಯಾಗಬೇಕಿತ್ತು. ಆದರೆ ಇಂದು ಹಲವೆಡೆ ಕ್ಲಿನಿಕ್‌ಗಳು ತೆರೆದಿದ್ದರೂ ಸೇವೆ ಲಭ್ಯವಿಲ್ಲದ ಹಾಗೂ ಕೆಲವೆಡೆ ಬಾಗಿಲೇ ತೆರೆಯದ ಸ್ಥಿತಿ ನಿರ್ಮಾಣವಾಗಿದೆ. ವೈದ್ಯರಿದ್ದರೆ, ಅಧಿಕಾರಿಯಿಲ್ಲ, ಇಬ್ಬರೂ ಇರುವೆಡೆ ಮಾಹಿತಿ ಕೊರತೆಯಿಂದ ರೋಗಿಗಳೇ ಇಲ್ಲ. ಸಮಯಪಾಲನೆ ಮತ್ತು ಮೇಲ್ವಿಚಾರಣೆಯ ಕೊರತೆಯಿಂದ ನಗರದ ಹಲವು ಕ್ಲಿನಿಕ್‌ಗಳು ಬಿಕೋ ಎನ್ನುತ್ತಿವೆ. ಆರೋಗ್ಯ ಸೇವೆ ಎಂಬುದು ಸರ್ಕಾರದ ದಾನವಲ್ಲ, ಅದು ಸಂವಿಧಾನಾತ್ಮಕ ಹೊಣೆಗಾರಿಕೆ. ಸಾರ್ವಜನಿಕರ ಹಕ್ಕು ಕೂಡ. ಯಾವುದೇ ಸರ್ಕಾರ ಯೋಜನೆಗಳನ್ನು ಆರಂಭಿಸುವುದಕ್ಕಿಂತ ಅವು ಸರಿಯಾಗಿ ಕಾರ್ಯಗತಗೊಳ್ಳುವಂತೆ ನೋಡಿಕೊಳ್ಳುವುದು ಮುಖ್ಯ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಪಂದಿಸಿ, ನಮ್ಮ ಕ್ಲಿನಿಕ್‌ಗಳು ನಿಜಕ್ಕೂ ನಮ್ಮವರ ಕ್ಲಿನಿಕ್‌ಗಳಾಗುವಂತೆ ಮಾಡುವುದೇ ಈಗಿನ ಅಗತ್ಯ.

ಬಂಗಾಳ ಚುನಾವಣೆ ಅಧಿಕಾರಕ್ಕಾಗಿ ಬಿಜೆಪಿ ತಂತ್ರ - ಮಮತಾ ಪ್ರತಿತಂತ್ರ

ಚುನಾವಣಾ ಹೊಸ್ತಿಲಿನಲ್ಲಿರುವ ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಯುತ್ತಿದೆ. ಸುಮಾರು 91.46 ಲಕ್ಷ ಮತದಾರರನ್ನು ಮತಪಟ್ಟಿಯಿಂದ ಹೊರಹಾಕಲಾಗಿದೆ ಎಂದು ವರದಿಗಳು ಹೇಳುತ್ತಿವೆ. ಅಂತಿಮ ಪಟ್ಟಿಯಲ್ಲಿ ಒಬ್ಬನೇ ಒಬ್ಬ ನಾಗರಿಕರನ್ನು ಮತಪಟ್ಟಿಯಿಂದ ಹೊರಹಾಕಿದರೆ, ಚುನಾವಣಾ ಆಯೋಗದ ಕಚೇರಿಗೆ ಘೇರಾವ್ ಹಾಕುವುದಾಗಿ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಎಚ್ಚರಿಕೆ ನೀಡಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ವಾದ-ವಿವಾದ, ಚರ್ಚೆಗಳು ನಡೆಯುತ್ತಿರುವ ನಡುವೆಯೇ ಚುನಾವಣಾ ಕಣವು ಸದ್ದು ಮಾಡುತ್ತಿದೆ. ಆಡಳಿತಾರೂಢ ಟಿಎಂಸಿ, ಪ್ರಮುಖ ವಿಪಕ್ಷ ಬಿಜೆಪಿ ಹಾಗೂ ಕಾಂಗ್ರೆಸ್-ಎಡಪಕ್ಷಗಳ ಮೈತ್ರಿಕೂಟಗಳು ಚುನಾವಣಾ ಸಿದ್ದತೆಯಲ್ಲಿ ತೊಡಗಿವೆ. ತಂತ್ರಗಳನ್ನು ಹೆಣೆಯುತ್ತಿವೆ.

ಬಂಗಾಳದಲ್ಲಿ 15 ವರ್ಷಗಳಿಂದ ಟಿಎಂಸಿ ಆಡಳಿತವಿದೆ. ಮೂರು ಸರ್ಕಾರಗಳನ್ನು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮುನ್ನಡೆಸುತ್ತಿದ್ದಾರೆ. ಮಮತಾ ಆಡಳಿತವನ್ನು ಕೊನೆಗೊಳಿಸಿ, ಅಧಿಕಾರ ಕಸಿದುಕೊಳ್ಳಲು ಬಿಜೆಪಿ ಶತಪ್ರಯತ್ನ ನಡೆಸುತ್ತಿದೆ. ನಾನಾ ತಂತ್ರಗಳನ್ನು ಹೆಣೆಯುತ್ತಿದೆ. 2021ರ ಬಂಗಾಳ ವಿಧಾನಸಭಾ ಚುನಾವಣೆಯ ಸಮಯದಲ್ಲಿ, ಮಮತಾ ಅವರ ಬಲಗೈ ಭಂಟನಂತಿದ್ದ ಸುವೇಂದ್ರ ಅಧಿಕಾರಿಯನ್ನು ಬಿಜೆಪಿ ಸೆಳೆದುಕೊಂಡಿತು. ಅವರ ಮೂಲಕ ಬಂಗಾಳವನ್ನು ಗೆಲ್ಲಲು ಯತ್ನಿಸಿತ್ತು. ಆದರೂ, ಅಧಿಕಾರ ಪಡೆಯಲು ಬಿಜೆಪಿಗೆ ಸಾಧ್ಯವಾಗಲಿಲ್ಲ. ಈ ಬಾರಿಯ ಚುನಾವಣೆಯಲ್ಲಾದರೂ ಬಂಗಾಳಿಗರನ್ನು ಗೆಲ್ಲಲೇಬೇಕೆಂಬ ಧಾವಂತಕ್ಕೆ ಬಿಜೆಪಿ ಬಿದ್ದಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೇ ಖುದ್ದು ಬಂಗಾಳ ಚುನಾವಣಾ ಮೈದಾನಕ್ಕೆ ಇಳಿದಿದ್ದಾರೆ.

ಮಮತಾ ಸರ್ಕಾರವನ್ನು ಮಣಿಸಲು ಬಿಜೆಪಿ ಮಿಷನ್ ಬೆಂಗಾಲ್ ಅಡಿಯಲ್ಲಿ ತಂತ್ರ ಹೆಣೆಯುತ್ತಿದೆ. ಅಮಿತ್ ಶಾ ಸುಮಾರು 10 ರೀತಿಯ ತಂತ್ರಗಳನ್ನು ಎಣೆದಿದ್ದಾರೆ. ತಂತ್ರಗಾರಿಕೆಯಲ್ಲಿ ಆರ್‌ಎಸ್‌ಎಸ್ ನಾಯಕರ ನೆರವನ್ನೂ ಅಮಿತ್ ಶಾ ಪಡೆದುಕೊಳ್ಳುತ್ತಿದ್ದಾರೆ. ಪಕ್ಷವು ಬಂಗಾಳದಲ್ಲಿ ಆಂತರಿಕ ಜಗಳ, ಬಂಡಾಯ, ಗುಂಪುಗಾರಿಕೆ, ನಾಯಕತ್ವ ಬಿಕ್ಕಟ್ಟನ್ನು ಎದುರಿಸುತ್ತಿದೆ. ಈ ಬಿಕ್ಕಟ್ಟನ್ನು ಶಮನ ಮಾಡಲು ಸಾಂಸ್ಥಿಕ ಸಮೀಕ್ಷೆಗಳನ್ನು ನಡೆಸಲು ಅಮಿತ್ ಶಾ ಮುಂದಾಗಿದ್ದಾರೆ. ನಾಯಕರ ನಡುವೆ ಸಮನ್ವಯ ತರಲು ಯತ್ನಿಸುತ್ತಿದ್ದಾರೆ. ಜೊತೆಗೆ, ತಮ್ಮ ಪಕ್ಷದ ಪ್ರಾಬಲ್ಯ ದುರ್ಬಲವಾಗಿರುವ ಕ್ಷೇತ್ರ ಮತ್ತು ದೌರ್ಬಲ್ಯಗಳನ್ನು ಗುರುತಿಸಲು ಬಿಜೆಪಿಯ ವಿಭಿನ್ನ ಹಂತಗಳ ನಾಯಕರನ್ನು ಭೇಟಿ ಮಾಡಿ, ಪ್ರಕ್ರಿಯೆಗಳನ್ನು ಪಡೆಯುತ್ತಿದ್ದಾರೆ. ಪಕ್ಷವು ಸಾಮೂಹಿಕವಾಗಿ ಚುನಾವಣಾ ಕಣದಲ್ಲಿ ಮುನ್ನಡೆಯುವಂತೆ ಮಾಡುವುದು ಬಿಜೆಪಿ ಹೈಕಮಾಂಡ್‌ನ ತಕ್ಷಣದ ಆದ್ಯತೆಯಾಗಿದೆ.

ಇದೇ ಸಮಯದಲ್ಲಿ, ಹಿಂದುತ್ವ ಪ್ರತಿಪಾದನೆಯನ್ನೂ ಬಿಜೆಪಿ ಮುನ್ನೆಲೆಗೆ ತಂದಿದೆ. ಹಿಂದು ಗುರುತು, ಮುಸ್ಲಿಂ ದ್ವೇಷವನ್ನು ಪ್ರಚಾರದ ಪ್ರಮುಖ ಅಸ್ತ್ರವಾಗಿ ಬಿಜೆಪಿ ಬಳಸಿಕೊಳ್ಳುತ್ತಿದೆ. ಬಾಂಗ್ಲಾ ಗಡಿಯಲ್ಲಿರುವ ಬಂಗಾಳದಲ್ಲಿ ಮುಸ್ಲಿಂ ಒಳನುಸುಳುಕೋರರ ವಿರುದ್ಧ ಹೋರಾಟ ಎಂಬ ನಿರೂಪಣೆಯಲ್ಲಿ ಗಟ್ಟಿಯಾಗಿ ಪ್ರತಿಪಾದಿಸುತ್ತಿದೆ. ಬಾಂಗ್ಲಾ ಒಳನುಸುಳುಕೋರರನ್ನು ಹೊರಹಾಕಿ, ಬಂಗಾಳವನ್ನು ಒಳನುಸುಳುವಿಕೆ ಮುಕ್ತಗೊಳಿಸುವ ಗುರಿ ಹೊಂದಿರುವುದಾಗಿ ಪ್ರಚಾರ ಮಾಡುತ್ತಿದೆ. ಮಮತಾ ಸರ್ಕಾರವನ್ನು ಹೀಗಳೆಯುತ್ತಿದೆ.

ಮಮತಾ ಸರ್ಕಾರದ ವಿರುದ್ಧ ಭ್ರಷ್ಟಾಚಾರ, ಮಹಿಳಾ ಅಸುರಕ್ಷತೆಯ ದಾಳ ಉರುಳಿಸುತ್ತಿದೆ. ಬಂಗಾಳದ ಆಕ್ರೋಶಕ್ಕೆ ಕಾರಣವಾಗಿದ್ದ ಕೋಲ್ಕತ್ತಾದಲ್ಲಿ ನಡೆದ ಓರ್ವ ವೈದ್ಯೆ ಮತ್ತು ಮತ್ತೋರ್ವ ಕಾನೂನು ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಪ್ರಕರಣಗಳನ್ನು ಬಳಸಿಕೊಂಡು, ಮಮತಾ ಸರ್ಕಾರವು ಹೆಣ್ಣುಮಕ್ಕಳಿಗೆ ರಕ್ಷಣೆ ನೀಡುವಲ್ಲಿ ವಿಫಲವಾಗಿದೆ ಎಂಬ ಭಾವನೆ ಬಿತ್ತುವ ಪ್ರಯತ್ನದಲ್ಲಿದೆ. ಅಂತೆಯೇ, ಕೇಂದ್ರ ಸರ್ಕಾರದ ಅಣತಿಯಲ್ಲಿ ಕೆಲಸ ಮಾಡುತ್ತಿವೆ ಎಂಬ ಕುಖ್ಯಾತಿ ಪಡೆದಿರುವ ಇಡಿ ಮತ್ತು ಸಿಬಿಐನಿಂದ ಬಂಧನಕ್ಕೊಳಗಾಗಿರುವ ಟಿಎಂಸಿ ಸಚಿವರು, ಶಾಸಕರು, ಸಂಸದರ ವಿರುದ್ಧ ಭ್ರಷ್ಟಾಚಾರ ಆರೋಪಗಳನ್ನು ಮುನ್ನೆಲೆ ತರುತ್ತಿದೆ.

ಇದೆಲ್ಲದರ ನಡುವೆ, ನವ ಬಂಗಾಳ ನಿರ್ಮಾಣದ ಭರವಸೆಯೊಂದಿಗೆ ಭ್ರಷ್ಟಾಚಾರ ಮುಕ್ತ, ಶಾಂತಿಯುತ, ಅಭಿವೃದ್ಧಿ ಹೊಂದಿದ ಪಶ್ಚಿಮ ಬಂಗಾಳವನ್ನು ನಿರ್ಮಿಸುತ್ತೇವೆಂದು ಹೇಳಿಕೊಳ್ಳುತ್ತಿದೆ. ತಾವು ಬಂಗಾಳಿ ಸಂಸ್ಕೃತಿ ಪ್ರತಿಪಾದಕರೆಂದು ತೋರಿಸಿಕೊಳ್ಳಲು ರವೀಂದ್ರನಾಥ ಟ್ಯಾಗೋರ್, ಬಂಕಿಮ್ ಚಂದ್ರ ಚಟ್ಟೋಪಾಧ್ಯಾಯ ಹಾಗೂ ಇತರ ಬಂಗಾಳಿ ಐಕಾನ್‌ಗಳ ಹೆಸರನ್ನು ಪಠಿಸುತ್ತಿದೆ. ವಂದೇ ಮಾತರಂ ಕುರಿತ ಚರ್ಚೆಯನ್ನೂ ಮುನ್ನೆಲೆಗೆ ತಂದಿದೆ.

ಏತನ್ಮಧ್ಯೆ, ಮುಸ್ಲಿಂ ಮತಗಳನ್ನು ವಿಭಜಿಸಲು ಹುಮಾಯೂನ್ ಕಬೀರ್ ಅವರನ್ನು ಬಿಜೆಪಿ ಬಳಸಿಕೊಳ್ಳುತ್ತಿದೆ. ಬಿಜೆಪಿ ತೊರೆದಿರುವ ಕಬೀರ್, ಹೊಸ ಪಕ್ಷ ಕಟ್ಟುವುದಾಗಿ ಘೋಷಿಸಿದ್ದಾರೆ. ಅವರ ಹೊಸ ಪಕ್ಷವು ಮುಸ್ಲಿಂ ಪ್ರಾಬಲ್ಯವಿರುವ ಸುಮಾರು 31 ಕ್ಷೇತ್ರಗಳಲ್ಲಿ ಮುಸ್ಲಿಂ ಮತಗಳನ್ನು ಚದುರಿಸುತ್ತದೆ. ಮುಸ್ಲಿಂ ಮತಗಳು ಹಿಡಿಯಾಗಿ ಟಿಎಂಸಿಗೆ ಹೋಗುವುದನ್ನು ತಡೆಯುತ್ತದೆ. ಪರಿಣಾಮ, ಆ ಕ್ಷೇತ್ರಗಳಲ್ಲಿ ಟಿಎಂಸಿ ಗೆಲುವಿಗೆ ತೊಡಕಾಗುತ್ತದೆ ಎಂದು ಬಿಜೆಪಿ ಭಾವಿಸಿದೆ. ಅದಕ್ಕಾಗಿ, ಟಿಎಂಸಿ ಮುಸ್ಲಿಂ ಮತಗಳನ್ನು ಪಡೆಯುತ್ತಿದೆ. ಆದರೆ, ಮುಸ್ಲಿಮರ ಮೇಲೆ ಟಿಎಂಸಿಗೆ ಕಾಳಜಿ ಇಲ್ಲವೆಂಬ ನಿರೂಪಣೆಯನ್ನು ಕಬೀರ್ ಬಿತ್ತುವ ಪ್ರಯತ್ನದಲ್ಲಿದ್ದಾರೆ.

ಆದಾಗ್ಯೂ, ಮಮತಾ ಸರ್ಕಾರದ ವಿರುದ್ಧ ಜನಾಭಿಪ್ರಾಯ ರೂಪಿಸಲು ಮತ್ತು ಮತದಾರರನ್ನು ತನ್ನತ್ತ ಸೆಳೆಯಲು ಬಿಜೆಪಿಗೆ ಈ ತಂತ್ರಗಳಷ್ಟೇ ಸಾಲುತ್ತಿಲ್ಲ ಎಂಬುದು ನೆಲದಲ್ಲಿ ಕಂಡುಬರುತ್ತಿದೆ. ಬಿಜೆಪಿ ಹೊಸ ತಂತ್ರಗಳ ಹುಡುಕಾಟದಲ್ಲಿದೆ.

ಬಿಜೆಪಿ ತಂತ್ರಕ್ಕೆ ಮಮತಾ ಪ್ರತಿತಂತ್ರ

ಬಿಜೆಪಿಯ ಹಿಂದುತ್ವ ಪ್ರತಿಪಾದನೆ ಮತ್ತು ಟಿಎಂಸಿ ವಿರುದ್ಧ ಬಿಜೆಪಿ ಮಾಡುತ್ತಿರುವ ಮುಸ್ಲಿಂ ಓಲೈಕೆ ಆರೋಪವನ್ನು ಬಿಜೆಪಿಯದ್ದೇ ಹಾದಿಯಲ್ಲಿ ಸರಿಗಟ್ಟಲು ಮಮತಾ ಪ್ರತಿತಂತ್ರ ಹೆಣೆಯುತ್ತಿದ್ದಾರೆ. ಈವರೆಗೆ ಮಮತಾ ಎಂದಿಗೂ ತಮ್ಮ ಧಾರ್ಮಿಕ ಗುರುತಿನ ಕುರಿತು ಮಾತನಾಡಿರಲಿಲ್ಲ. ಅವರು ಅನೇಕ ಬಂಗಾಳಿ ಹಿಂದು ಮಹಿಳೆಯರಂತೆ ಅವರ ಉಡುಗೆ-ತೊಡುಗೆ ಸಾಧಾರಣವಾಗಿತ್ತು. ಅವರು ವೈಯಕ್ತಿಕವಾಗಿ ಧರ್ಮನಿಷ್ಠರಾಗಿದ್ದರು. ಆದರೆ, ಈಗ ಅವರು ಧಾರ್ಮಿಕತೆಯನ್ನು ಪ್ರತಿಪಾದಿಸುತ್ತಿದ್ದಾರೆ. ಅವರ ಈ ತಂತ್ರವು 2024ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ವಿರುದ್ಧದ ಹೋರಾಟಕ್ಕೆ ನೆರವಾಗಿತ್ತು. ಈಗಲೂ ನೆರವಿಗೆ ಬರುತ್ತದೆ ಎಂದು ಮಮತಾ ಭಾವಿಸಿದ್ದಾರೆ.

ಜಾತ್ಯತೀತತೆ ಕುರಿತು ಮಾತನಾಡುತ್ತಲೇ, ಧಾರ್ಮಿಕ ಆಚರಣೆಗಳನ್ನು ಆಯೋಜಿಸುವುದು, ಭಾಗಿಯಾಗುವುದು ಹಾಗೂ ದೇವಾಲಯ ನಿರ್ಮಾಣದ ಘೋಷಣೆಗಳನ್ನು ಮಾಡುತ್ತಿದ್ದಾರೆ. ಕೋಲ್ಕತ್ತಾದ ನ್ಯೂ ಟೌನ್‌ನಲ್ಲಿ ದುರ್ಗಾ ದೇವಸ್ಥಾನವನ್ನು ನಿರ್ಮಿಸುವುದಾಗಿ ಮಮತಾ ಘೋಷಿಸಿದ್ದು, ಯೋಜನೆಗೆ ಅಡಿಪಾಯ ಹಾಕಿದ್ದಾರೆ. ತಮ್ಮ ಆಡಳಿತದಲ್ಲಿ (2021) ದುರ್ಗಾ ಪೂಜೆಯನ್ನು ಯುನೆಸ್ಕೋ ಮಾನವೀಯತೆಯ ಅಮೂರ್ತ ಸಾಂಸ್ಕೃತಿಕ ಪರಂಪರೆಯೆಂದು ಗುರುತಿಸಿದೆ. ಇದು ತಮ್ಮ ಹೆಗ್ಗಳಿಕೆಯೆಂದು ಹೇಳಿಕೊಳ್ಳುತ್ತಿದ್ದಾರೆ.

ಮುಖ್ಯ ಅಂಶವೆಂದರೆ, ಬಂಗಾಳದ ಹಿಂದುಗಳು ಹೆಚ್ಚು ಮಾಂಸಹಾರಿಗಳು. ಅವರ ಸಂಸ್ಕೃತಿಯಲ್ಲಿ ಮೀನುಗಳನ್ನು ಶುಭ ಸಂಕೇತವಾಗಿ ಪರಿಗಣಿಸಲಾಗುತ್ತದೆ. ದೇವಾಲಯಗಳಲ್ಲಿ ಮೀನು ಖಾದ್ಯವನ್ನು ನೈವೇದ್ಯವಾಗಿ ಅರ್ಪಿಸಲಾಗುತ್ತಿದೆ. ಆದರೆ, ಮಾಂಸಾಹಾರವನ್ನು ಬಿಜೆಪಿ ಹೊಲಸು ಎಂದು ಭಾವಿಸುತ್ತದೆ. ಆದ್ದರಿಂದ, ಬಿಜೆಪಿ ಮಮತಾ ಬಂಗಾಳಿ ಸಂಸ್ಕೃತಿಯಲ್ಲಿ ಉತ್ತರಿಸುತ್ತಿದ್ದಾರೆ. ಮಾಂಸಾಹಾರ ಮತ್ತು ಬಿಜೆಪಿ ರಾಜಕೀಯವನ್ನು ಬಯಲುಗೊಳಿಸುತ್ತಿದ್ದಾರೆ.

ಮೋದಿ ಮತ್ತು ಅಮಿತ್ ಶಾ ಅವರನ್ನು ಹೊರಗಿನವರು (ದೆಹಲಿ) ಎಂದು ಬಿಂಬಿಸುವ ರಾಜಕೀಯ ನಿರೂಪಣೆಯನ್ನು ಮಮತಾ ನಿರ್ಮಿಸಿದ್ದಾರೆ. ಬಂಗಾಳದ ಮೇಲೆ ಹಿಡಿತ ಸಾಧಿಸಲು ಬಾಹ್ಯ ಶಕ್ತಿಗಳನ್ನು ಪ್ರಯತ್ನಿಸುತ್ತಿವೆ. ಅವರು (ಮೋದಿ-ಶಾ) ಬಂಗಾಳಿಗಳಲ್ಲ ಎಂದು ಹೇಳುವ ಮೂಲಕ ಪ್ರಾದೇಶಿಕತೆ ಮತ್ತು ಸ್ಥಳೀಯ ಸಂಸ್ಕೃತಿಗಳ ಕುರಿತು ಹೆಚ್ಚು ಮಾತನಾಡುತ್ತಿದ್ದಾರೆ.

ಇನ್ನು, ಚುನಾವಣೆ ಸಮೀಪಿಸುತ್ತಿರುವ ಇದೇ ಸಮಯದಲ್ಲಿ ಮಮತಾ ಅವರ ಸೋದರಳಿಯ, ಟಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರು ರಾಜ್ಯಾದ್ಯಂತ ಸಂಘಟನಾ ಯಾತ್ರೆ ಕೈಗೊಂಡಿದ್ದಾರೆ. ಅವರು ತಮ್ಮ ಯಾತ್ರೆಗೆ, ಅಬರ್ ಜಿತ್ಬೆ ಬಂಗಾಳ (ಬಂಗಾಳ ಮತ್ತೆ ಗೆಲ್ಲುತ್ತದೆ) ಎಂಬ ಹೆಸರಿಟ್ಟುಕೊಂಡಿದ್ದಾರೆ. ರೋಡ್‌ಶೋಗಳು, ಸಾರ್ವಜನಿಕ ಸಭೆಗಳ ಮೂಲಕ ಜನರನ್ನು ತಲುಪುತ್ತಿದ್ದಾರೆ. ಪಕ್ಷದ ಕಾರ್ಯಕರ್ತರನ್ನು ಹುರಿದುಂಬಿಸುತ್ತಿದ್ದಾರೆ. ಮಮತಾ ಸರ್ಕಾರದ ಸಾಧನೆಗಳನ್ನು ಸಾರುತ್ತಿದ್ದಾರೆ.

2023ರ ಸೆಪ್ಟೆಂಬರ್‌ನಲ್ಲಿ ನಡೆದ ಪಂಚಾಯತಿ ಚುನಾವಣೆಗೂ ಮುನ್ನ ಅಭಿಷೇಕ್ ಅವರು ಇಂತಹದ್ದೇ ರ್‍ಯಾಲಿ ನಡೆಸಿದ್ದರು. ಆ ವರ್ಷದ ಫೆಬ್ರವರಿ-ಮಾರ್ಚ್‌ನಲ್ಲಿ ನಡೆದ ನಬೋ ಜೋರ್ ಯಾತ್ರಾ (ಹೊಸ ಅಲೆ ಯಾತ್ರೆ) ಸ್ಥಳೀಯ ಚುನಾವಣೆಗಳಲ್ಲಿ ಟಿಎಂಸಿ ಗೆದ್ದು ಬೀಗಲು ಕಾರಣವಾಗಿತ್ತು. ಮಾತ್ರವಲ್ಲದೆ, 2024ರ ಲೋಕಸಭಾ ಚುನಾವಣೆಯ ಮೇಲೂ ಪ್ರಭಾವ ಬೀರಿತ್ತು. ಈಗ, ಅಬರ್ ಜಿತ್ಬೆ ಬಂಗಾಳ ರ್‍ಯಾಲಿಯು ವಿಧಾನಸಭಾ ಚುನಾವಣೆಯಲ್ಲಿ ಜನರನ್ನು ಟಿಎಂಸಿಯತ್ತ ಒಗ್ಗೂಡಿಸುತ್ತದೆ ಎಂದು ಪಕ್ಷದ ನಾಯಕರು ನಂಬಿದ್ದಾರೆ.

''ರಾಜ್ಯವನ್ನು ಹತ್ತಿಕ್ಕಲು ಮತ್ತು ಬಂಗಾಳಿಗರ ಹಕ್ಕುಗಳು, ಘನತೆ ಹಾಗೂ ಗುರುತನ್ನು ದುರ್ಬಲಗೊಳಿಸಲು ಬಿಜೆಪಿ ಮಾಡುತ್ತಿರುವ ಪ್ರಯತ್ನಗಳ ವಿರುದ್ಧ ಬಂಗಾಳ ದಂಗೆ ಏಳಲಿದೆ. ಮೋದಿ-ಶಾ ಜೋಡಿಯು ಚುನಾವಣಾ ಆಯೋಗ (ಇಸಿ) ಮತ್ತು ಇಡಿ ಯಂತಹ ಕೇಂದ್ರ ಸಂಸ್ಥೆಗಳನ್ನು ಅಸ್ತ್ರವಾಗಿ ಬಳಸಿಕೊಂಡಿದ್ದರೂ, ಬಂಗಾಳವು ವಿಜಯಶಾಲಿಯಾಗಿ ಹೊರಹೊಮ್ಮಲಿದೆ'' ಎಂದು ಅಭಿಷೇಕ್ ಹೇಳುತ್ತಿದ್ದಾರೆ. ನೀವು ಎಷ್ಟೇ ದಾಳಿ ಮಾಡಿದರೂ ಬಂಗಾಳ ಮತ್ತೆ ಗೆಲ್ಲುತ್ತದೆ ಎಂದು ಘೋಷಣೆ ಮೊಳಗಿಸುತ್ತಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR